ಸಂಪುಟ: 11 ಸಂಚಿಕೆ: 197 ಪುಟ: 4+2 ಬೆಲೆ : 3.00 ಗುರುವಾರ, ಸೆಪ್ಟೆಂಬರ್ 10, 2026 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್ ಶರೀಫನವರ್

# ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ... VIJAYA SAKSHI KANNADA DAILY ಕನ್ನಡ ದಿನಪತ್ರಿಕೆ




Volume : 11 Issue : 197 Pages : 4+2 Rate : 3.00 Thursday, September 10, 2026 Gadag RNINo:KARKAN/2015/63412 E-mail: vijayasakshidaily@gmail.com Post Regn.No:GDG/72/2020-22

ವಿಜಯ ಸಾಕ್ಷಿ ದಿನಪತ್ರಿಕೆ ಈಗ ಆನ್ ಲೈನ್ ನಲ್ಲಿಯೂ ಲಭ್ಯ. ನಿಮ್ಮ ನೆಚ್ಚಿನ ಪತ್ರಿಕೆಯನ್ನು ಓದಲು www.epaper.Vijayasakshi.com ಜಾಲತಾಣಕ್ಕೆ ಭೇಟಿ ನೀಡಿ. ಕ್ಷಣ ಕ್ಷಣದ ಸುದ್ದಿಗಳಿಗಾಗಿ www.Vijayasakshi.com ವೀಕ್ಷಿಸಿ.

ಜ್ವಲಂತ ಸಮಸ್ಯೆಗಳ ಚರ್ಚೆಗೆ ಶೇ.5ರಷ್ಟೂ ಸಮಯ ಮೀಸಲಿಲ್ಲ; ಪ್ರದೇಶವಾರು ಚರ್ಚೆಗೆ ಎಚ್.ಕೆ. ಪಾಟೀಲ ಆಗ್ರಹ

# ಉತ್ತರ ಕರ್ನಾಟಕಕ್ಕೆ ಸದನದಲ್ಲೂ ಅನ್ಯಾಯ

**ವಿಜಯಸಾಕ್ಷಿ ಸುದ್ದಿ, ಗದಗ**

ವಿಧಾನಮಂಡಲದ ಉಭಯ ಸದನಗಳ ಕಲಾಪಗಳಲ್ಲಿ ಉತ್ತರ ಕರ್ನಾಟಕದ ಜ್ವಲಂತ ಸಮಸ್ಯೆಗಳ ಚರ್ಚೆಗೆ ಶೇ.5ರಷ್ಟೂ ಸಮಯ ಮೀಸಲಾಗುತ್ತಿಲ್ಲ ಎಂದು ಮಾಜಿ ಸಚಿವ ಎಚ್.ಕೆ. ಪಾಟೀಲ ತೀವ್ರ ಅಸಮಾಧಾನ ವ್ಯಕ್ತಪಡಿಸಿದರು.

ನಗರದ ಕಾಟನ್ ಸೇಲ್ ಸೊಸೈಟಿಯಲ್ಲಿ ಬುಧವಾರ ಜಿಲ್ಲಾ ನಾಗರಿಕ ಸಮಿತಿ ವತಿಯಿಂದ ವಿಧಾನಸಭೆ ಅಧ್ಯಕ್ಷರು, ಉಪಸಭಾಧ್ಯಕ್ಷರು, ಸಭಾಪತಿ ಹಾಗೂ ಉಪಸಭಾಪತಿಗಳಿಗೆ ಸನ್ಮಾನ ನೆರವೇರಿಸಿ ಅವರು ಮಾತನಾಡಿದರು.

ಉತ್ತರ ಕರ್ನಾಟಕದ ವಿಶ್ವವಿದ್ಯಾಲಯಗಳ ಸ್ಥಿತಿ ಶೋಚನೀಯವಾಗಿದ್ದು, ಸುಮಾರು ಶೇ.80ರಷ್ಟು ಹುದ್ದೆಗಳು ಖಾಲಿ ಇವೆ. ಮೂಲಸೌಕರ್ಯ ಹಾಗೂ ಕಟ್ಟಡಗಳು ಬಳಕೆಯಾಗದೆ ಪಾಳುಬಿದ್ದಿವೆ. ಇಂತಹ ಗಂಭೀರ ಸಮಸ್ಯೆಗಳ ಕುರಿತು ಅಧಿವೇಶನದಲ್ಲಿ ವಿಸ್ತೃತ ಚರ್ಚೆಯಾಗಬೇಕು ಎಂದರು.

ಉತ್ತರ ಕರ್ನಾಟಕದ ವಿಚಾರಗಳು ಕೇವಲ ಬೆಳಗಾವಿ ಅಧಿವೇಶನಕ್ಕೆ ಸೀಮಿತವಾಗಬಾರದು. ಬೆಳಗಾವಿ ಅಧಿವೇಶನದಲ್ಲಿ ಬೆಂಗಳೂರಿನ ಸಮಸ್ಯೆಗಳ ಬಗ್ಗೆಯೂ, ಬೆಂಗಳೂರಿನ ಅಧಿವೇಶನದಲ್ಲಿ ಉತ್ತರ ಕರ್ನಾಟಕದ ಅಭಿವೃದ್ಧಿ ಬಗ್ಗೆಯೂ ಚರ್ಚೆಯಾಗಬೇಕು.



ಪ್ರಾದೇಶಿಕ ಅಸಮತೋಲನ ನಿವಾರಣೆಗೆ ಪ್ರದೇಶವಾರು ಪ್ರತ್ಯೇಕ ಚರ್ಚೆಗೆ ಅವಕಾಶ ಕಲ್ಪಿಸುವ ನಿಯಮ ರೂಪಿಸಬೇಕು ಎಂದು ಒತ್ತಾಯಿಸಿದರು.

ತಾವು ಸಚಿವರಾಗಿದ್ದಾಗ ಉತ್ತರ ಕರ್ನಾಟಕದ ಹಿತದೃಷ್ಟಿಯಿಂದ ಅಂಗೀಕರಿಸಿದ್ದ ಎಂಟು ನಿರ್ಣಯಗಳು ದಿಕ್ಕೂಚಿಯಾಗಿವೆ. ಅವು ಯಾವ ಹಂತದಲ್ಲಿ ಅನುಷ್ಠಾನಗೊಂಡಿವೆ ಎಂಬುದನ್ನು ಪರಿಶೀಲಿಸಿ, ಸರ್ಕಾರವನ್ನು ಎಚ್ಚರಿಸುವ ಕೆಲಸವನ್ನು ಉಭಯ ಸದನಗಳ ಪೀಠಾಧ್ಯಕ್ಷರು ಮಾಡಬೇಕು ಎಂದರು.

**'ನಿರ್ಣಯಗಳು ಕಡತದಲ್ಲೇ ಉಳಿಯಬಾರದು'**

ಸದನದಲ್ಲಿ ಕೈಗೊಂಡ ನಿರ್ಣಯಗಳು ಅನುಷ್ಠಾನಗೊಳ್ಳಲು ಪೀಠಾಧ್ಯಕ್ಷರು ಸರ್ಕಾರಕ್ಕೆ ಕಟ್ಟುನಿಟ್ಟಿನ ನಿರ್ದೇಶನ ನೀಡಬೇಕು. ಸಭಾಧ್ಯಕ್ಷರು ಹಾಗೂ ಸಭಾಪತಿಗಳು ಪಕ್ಷಾತೀತವಾಗಿರಬೇಕಾದರೂ ಜನರ ಪರವಾಗಿ ಮಾತನಾಡಲು ಯಾವುದೇ ನಿರ್ಬಂಧವಿಲ್ಲ ಎಂದು ಎಚ್.ಕೆ. ಪಾಟೀಲ ಹೇಳಿದರು.

ಸಭಾಧ್ಯಕ್ಷ ಜಿ.ಎಸ್. ಪಾಟೀಲ ಮಾತನಾಡಿ, ಉತ್ತರ ಕರ್ನಾಟಕಕ್ಕೆ ಅನ್ಯಾಯವಾದರೆ ಸರ್ಕಾರವನ್ನು ಎಚ್ಚರಿಸುವುದಾಗಿ ತಿಳಿಸಿದರು.

ಬರ ಸಮೀಕ್ಷೆ ಬಳಿಕ ಗದಗ ಜಿಲ್ಲೆಯ ಗಜೇಂದ್ರಗಡ ತಾಲೂಕನ್ನು ಮಾತ್ರ ಬರಪೀಡಿತ ಎಂದು ಘೋಷಿಸಿರುವುದು ತಾರತಮ್ಯಕ್ಕೆ ಸಾಕ್ಷಿಯಾಗಿದೆ ಎಂದು ಅಸಮಾಧಾನ ವ್ಯಕ್ತಪಡಿಸಿದರು. ಜಿಲ್ಲೆಯ ಸಮಗ್ರ ಅಭಿವೃದ್ಧಿಗೆ ಎಲ್ಲರೂ ಒಗ್ಗಟ್ಟಿನಿಂದ ಮುನ್ನಡೆಯಬೇಕು ಎಂದರು.

ಸಭಾಪತಿ ಸಲೀಂ ಅಹ್ಮದ್, ಉಪಸಭಾಧ್ಯಕ್ಷೆ ಉಮಾಶ್ರೀ ಮಾತನಾಡಿದರು. ಜ.ತೋಂಟದ ಸಿದ್ದರಾಮ ಸ್ವಾಮೀಜಿ ಸಾನ್ನಿಧ್ಯ ವಹಿಸಿದ್ದರು. ಜಿಲ್ಲಾ ನಾಗರಿಕ ಸಮಿತಿ ಅಧ್ಯಕ್ಷ ಡಿ.ಆರ್. ಪಾಟೀಲ ಸ್ವಾಗತಿಸಿದರು.

> ನಾನು ಈ ಸಾಂವಿಧಾನಿಕ ಪೀಠದಲ್ಲಿ ಎಷ್ಟು ದಿನ ಇರುತ್ತೇನೆ ಎಂಬುದು ಗೊತ್ತಿಲ್ಲ. ಆದರೆ ಇರುವಷ್ಟು ದಿನ ಉತ್ತರ ಕರ್ನಾಟಕಕ್ಕೆ ಅನ್ಯಾಯವಾದರೆ ಸರ್ಕಾರವನ್ನು ಎಚ್ಚರಿಸುವ ಕೆಲಸ ಮಾಡುತ್ತೇನೆ. ಜಿಲ್ಲೆಯ ಸಮಗ್ರ ಅಭಿವೃದ್ಧಿಗೆ ಎಲ್ಲರೂ ಶಿಸ್ತು ಮತ್ತು ಒಗ್ಗಟ್ಟಿನಿಂದ ಮುನ್ನಡೆಯಬೇಕು.
> - ಜಿ.ಎಸ್. ಪಾಟೀಲ, ಸಭಾಧ್ಯಕ್ಷರು

> ಉತ್ತರ ಕರ್ನಾಟಕದ ಜ್ವಲಂತ ಸಮಸ್ಯೆಗಳ ಚರ್ಚೆಗೆ ವಿಧಾನಮಂಡಲದಲ್ಲಿ ಶೇ.5ರಷ್ಟೂ ಸಮಯ ಸಿಗುತ್ತಿಲ್ಲ. ಪ್ರಾದೇಶಿಕ ಅಸಮತೋಲನ ನಿವಾರಣೆಗೆ ಪ್ರದೇಶವಾರು ಪ್ರತ್ಯೇಕ ಚರ್ಚೆಗೆ ಅವಕಾಶ ಕಲ್ಪಿಸುವ ನಿಯಮ ರೂಪಿಸಬೇಕು. ಸದನದಲ್ಲಿ ಅಂಗೀಕರಿಸಿದ ನಿರ್ಣಯಗಳು ಕಡತದಲ್ಲೇ ಉಳಿಯದೆ ಅನುಷ್ಠಾನಗೊಳ್ಳುವಂತೆ ಪೀಠಾಧ್ಯಕ್ಷರು ಸರ್ಕಾರವನ್ನು ಎಚ್ಚರಿಸಬೇಕು.
> - ಎಚ್.ಕೆ. ಪಾಟೀಲ, ಮಾಜಿ ಸಚಿವ

## ನಾಳೆ ನೇರ ಸಂದರ್ಶನ

**ವಿಜಯಸಾಕ್ಷಿ ಸುದ್ದಿ, ಗದಗ**

ಜಿಲ್ಲಾ ಉದ್ಯೋಗ ವಿನಿಮಯ ಕಚೇರಿ ವತಿಯಿಂದ ಸೆ. 11ರಂದು ಬೆಳಗ್ಗೆ 10 ಗಂಟೆಗೆ ಜಿಲ್ಲಾ ಆಡಳಿತ ಭವನದ 2ನೇ ಮಹಡಿ, ಕೊಠಡಿ ಸಂಖ್ಯೆ 215ರಲ್ಲಿ ನೇರ ಸಂದರ್ಶನ ಆಯೋಜಿಸಲಾಗಿದೆ.

ಬೆಂಗಳೂರು ಮೂಲದ ಎಮಿನೆಂಟ್ ಎಚ್.ಆರ್. ಸೊಲ್ಯೂಷನ್ ಪ್ರೈವೇಟ್ ಲಿಮಿಟೆಡ್ ಸಂಸ್ಥೆ ಸಂದರ್ಶನದಲ್ಲಿ ಭಾಗವಹಿಸಲಿದ್ದು, ಐಟಿಐ, ಡಿಪ್ಲೊಮಾ ಹಾಗೂ ಯಾವುದೇ ಪದವಿ ವಿದ್ಯಾರ್ಹತೆ ಹೊಂದಿರುವ 18ರಿಂದ 30 ವರ್ಷದ ಪುರುಷ ಮತ್ತು ಮಹಿಳಾ ಅಭ್ಯರ್ಥಿಗಳಿಗೆ ಆಪರೇಟರ್ ಹುದ್ದೆಗೆ ಅವಕಾಶವಿದೆ. ಉದ್ಯೋಗ ಸ್ಥಳ ಬೆಂಗಳೂರು.

ಅಭ್ಯರ್ಥಿಗಳು ವಿದ್ಯಾರ್ಹತೆಯ ಅಂಕಪಟ್ಟಿಗಳ ಜೆರಾಕ್ಸ್ ಪ್ರತಿ, ಎರಡು ರೆಸ್ಯೂಮೆ ಹಾಗೂ ಆಧಾರ್ ಕಾರ್ಡ್ ಜೆರಾಕ್ಸ್ ಪ್ರತಿ ತರಬೇಕು. ಸಂದರ್ಶನದಲ್ಲಿ ಭಾಗವಹಿಸುವ ಅಭ್ಯರ್ಥಿಗಳಿಗೆ ನೋಂದಣಿ ಕಡ್ಡಾಯವಾಗಿದ್ದು, ಸ್ಥಳದಲ್ಲೇ ನೋಂದಣಿ ಮಾಡಿಕೊಳ್ಳಬೇಕು. ಯುವನಿಧಿ ಯೋಜನೆಯ ಫಲಾನುಭವಿಗಳು ಕಡ್ಡಾಯವಾಗಿ ಭಾಗವಹಿಸಬೇಕು.

ಹೆಚ್ಚಿನ ಮಾಹಿತಿಗಾಗಿ 6363330688, 9686920883 ಸಂಪರ್ಕಿಸಬಹುದು ಎಂದು ಜಿಲ್ಲಾ ಉದ್ಯೋಗಾಧಿಕಾರಿ ಬಸವಂತ ಪಿ.ಎನ್. ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಸತೀಶ ಜಾರಕಿಹೊಳಿ ಮನೆ ಮೇಲೆ ಇಡಿ ದಾಳಿ: ಇಂದು ಅಹಿಂದ ಪ್ರತಿಭಟನೆ

**ವಿಜಯಸಾಕ್ಷಿ ಸುದ್ದಿ, ಗದಗ**

ಲೋಕೋಪಯೋಗಿ ಸಚಿವ ಹಾಗೂ ಅಹಿಂದ ನಾಯಕ ಸತೀಶ ಜಾರಕಿಹೊಳಿ ಅವರ ಮನೆ

ಮೇಲೆ ಜಾರಿ ನಿರ್ದೇಶನಾಲಯ (ಇಡಿ) ಅಧಿಕಾರಿಗಳು ನಡೆಸಿರುವ ದಾಳಿ ರಾಜಕೀಯ ಪ್ರೇರಿತವಾಗಿದ್ದು, ಬಿಜೆಪಿ ಷಡ್ಯಂತ್ರದ ಭಾಗವಾಗಿದೆ ಎಂದು ಆರೋಪಿಸಿ ಗದಗ ಜಿಲ್ಲಾ ಅಹಿಂದ ವತಿಯಿಂದ ಇಂದು ಪ್ರತಿಭಟನೆ ಹಮ್ಮಿಕೊಳ್ಳಲಾಗಿದೆ.

ಸೆ.10ರಂದು ಬೆಳಿಗ್ಗೆ 11 ಗಂಟೆಗೆ ಗದಗ ನಗರದ ಗಾಂಧಿ ವೃತ್ತದಲ್ಲಿ ನಡೆಯಲಿರುವ ಪ್ರತಿಭಟನೆಯಲ್ಲಿ ಅಹಿಂದ ಮುಖಂಡರು, ಕಾರ್ಯಕರ್ತರು ಹಾಗೂ ವಿವಿಧ ಸಮುದಾಯಗಳ ಪ್ರಮುಖರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಬೇಕು ಎಂದು ಅಹಿಂದ ರಾಜ್ಯ ಮುಖಂಡ ಹೆಚ್.ಎಸ್. ಸೋಂಪೂರ ಕರೆ ನೀಡಿದ್ದಾರೆ.

ದಾಳಿಯನ್ನು ಖಂಡಿಸಿ ನಡೆಯಲಿರುವ ಈ ಪ್ರತಿಭಟನೆಯಲ್ಲಿ ಬಿಜೆಪಿ ವಿರುದ್ಧ ಆಕ್ರೋಶ ವ್ಯಕ್ತಪಡಿಸಿ, ರಾಜಕೀಯ ಪ್ರೇರಿತ ದಾಳಿಯನ್ನು ವಿರೋಧಿಸಲಾಗುವುದು ಎಂದು ಅಹಿಂದ ಸಂಘಟನೆ ತಿಳಿಸಿದೆ.

ಅಹಿಂದ ರಾಜ್ಯ ಮುಖಂಡ ಹೆಚ್.ಎಸ್. ಸೋಂಪೂರ ಮಾತನಾಡಿ, ಸತೀಶ ಜಾರಕಿಹೊಳಿ ಅವರ ಮನೆ ಮೇಲೆ ನಡೆದಿರುವ ಇಡಿ ದಾಳಿ ರಾಜಕೀಯ ಪ್ರೇರಿತವಾಗಿದೆ. ಇದರ ಹಿಂದೆ ಬಿಜೆಪಿ ಷಡ್ಯಂತ್ರವಿದೆ ಎಂದು ಆರೋಪಿಸಿದರು. ದಾಳಿಯನ್ನು ಖಂಡಿಸಿ ನಡೆಯಲಿರುವ ಪ್ರತಿಭಟನೆಗೆ ಅಹಿಂದ ಸಮುದಾಯದವರು ಹೆಚ್ಚಿನ ಸಂಖ್ಯೆಯಲ್ಲಿ ಆಗಮಿಸಿ ಬೆಂಬಲ ನೀಡಬೇಕು ಎಂದು ಮನವಿ ಮಾಡಿದರು.

## ನಾಳೆ ರಾಷ್ಟ್ರೀಯ ಅರಣ್ಯ ಹುತಾತ್ಮರ ದಿನಾಚರಣೆ

**ವಿಜಯಸಾಕ್ಷಿ ಸುದ್ದಿ, ಗದಗ**

ಕರ್ನಾಟಕ ಅರಣ್ಯ ಇಲಾಖೆ ಹಾಗೂ ಗದಗ ಅರಣ್ಯ ವಿಭಾಗದ ಸಂಯುಕ್ತಾಶ್ರಯದಲ್ಲಿ ರಾಷ್ಟ್ರೀಯ ಅರಣ್ಯ ಹುತಾತ್ಮರ ದಿನಾಚರಣೆ ಅಂಗವಾಗಿ ಸೆ. 11ರಂದು ಬೆಳಗ್ಗೆ 8 ಗಂಟೆಗೆ ಬಿಂಕದಕಟ್ಟಿಯ ಸಾಲುಮರದ ತಿಮ್ಮಕ್ಕ ಸಸ್ಯೋದ್ಯಾನದಲ್ಲಿ ಅರಣ್ಯ ಹುತಾತ್ಮರಿಗೆ ಶ್ರದ್ಧಾಂಜಲಿ ಸಲ್ಲಿಸುವ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ.

ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶೆ ನಾಗವೇಣಿ ಹಾಗೂ ಹಿರಿಯ ದಿವಾಣಿ ನ್ಯಾಯಾಧೀಶ, ಡಿಎಲ್ಎಸ್ಎ ಸದಸ್ಯ ಕಾರ್ಯದರ್ಶಿ ಚಂದ್ರಗೌಡ ಶಿವನಗೌಡ ಶಿವನಗೌಡ್ರ ಮುಖ್ಯ ಅತಿಥಿಗಳಾಗಿ ಆಗಮಿಸುವರು. ಉಪ ಅರಣ್ಯ ಸಂರಕ್ಷಣಾಧಿಕಾರಿ ಸಂತೋಷಕುಮಾರ ಕೆಂಚಪ್ಪನವರ ಅಧ್ಯಕ್ಷತೆ ವಹಿಸುವರು.

ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ್, ಜಿಪಂ ಸಿಇಒ ಮುಕುಲ್ ಜೈನ್, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಮಿಥುನ್ ಹೆಚ್.ಎನ್., ಅಪರ ಜಿಲ್ಲಾಧಿಕಾರಿ ಡಾ. ದುರ್ಗೇಶ ಕೆ.ಆರ್. ಸೇರಿದಂತೆ ವಿವಿಧ ಇಲಾಖೆಗಳ ಅಧಿಕಾರಿಗಳು ವಿಶೇಷ ಆಹ್ವಾನಿತರಾಗಿ ಪಾಲ್ಗೊಳ್ಳುವರು.

ಇದೇ ಸಂದರ್ಭದಲ್ಲಿ ಅರಣ್ಯ ಹುತಾತ್ಮರ ದಿನಾಚರಣೆ ಅಂಗವಾಗಿ ರಕ್ತದಾನ ಶಿಬಿರವನ್ನೂ ಆಯೋಜಿಸಲಾಗಿದೆ.

ಸಿಂಥೆಟಿಕ್ ಫುಟ್‌ಬಾಲ್ ಮೈದಾನಕ್ಕೆ ಕ್ರೀಡಾಪಟುಗಳ ಆಕ್ರೋಶ । ಜಿಲ್ಲಾ ಕ್ರೀಡಾಂಗಣಕ್ಕೆ ಮುತ್ತಿಗೆ ಯತ್ನ

# ಟರ್ಫ್‌ಗಾಗಿ ಕ್ರೀಡಾಂಗಣ ಬಲಿ?



**ವಿಜಯಸಾಕ್ಷಿ ಸುದ್ದಿ, ಗದಗ**

ಜಿಲ್ಲೆಯ ಪ್ರಮುಖ ಕ್ರೀಡಾ ತಾಣವಾಗಿರುವ ಕೆ.ಎಚ್. ಪಾಟೀಲ ಕ್ರೀಡಾಂಗಣದಲ್ಲಿ ನಿರ್ಮಿಸಲಾಗುತ್ತಿರುವ ಸಿಂಥೆಟಿಕ್ ಟರ್ಫ್ ಫುಟ್‌ಬಾಲ್ ಮೈದಾನ ಕಾಮಗಾರಿಗೆ ವಿರೋಧ ವ್ಯಕ್ತಪಡಿಸಿದ ಮಾಜಿ ಹಾಗೂ ಹಾಲಿ ಕ್ರೀಡಾಪಟುಗಳು ಹಾಗೂ ವಿವಿಧ ಕ್ರೀಡಾ ಸಂಘಟನೆಗಳ ಆಶ್ರಯದಲ್ಲಿ ಬುಧವಾರ ಜಿಲ್ಲಾ ಕ್ರೀಡಾಂಗಣಕ್ಕೆ ಮುತ್ತಿಗೆ ಹಾಕಲು ಯತ್ನಿಸಿದರು.

ಬಹುಉದ್ದೇಶದ ಕ್ರೀಡಾಂಗಣದಲ್ಲಿ ಟರ್ಫ್ ನಿರ್ಮಿಸುವುದರಿಂದ ಅಥ್ಲೆಟಿಕ್ಸ್ ಸೇರಿದಂತೆ ವಿವಿಧ ಕ್ರೀಡೆಗಳಿಗೆ ಲಭ್ಯವಿರುವ ಸ್ಥಳಾವಕಾಶ ಕಡಿಮೆಯಾಗಲಿದೆ. ಇಲ್ಲಿ ದಸರಾ ಕ್ರೀಡಾಕೂಟ, ಸರ್ಕಾರಿ ನೌಕರರ ಕ್ರೀಡಾಕೂಟ, ಶಾಲಾ-ಕಾಲೇಜುಗಳ ಜಿಲ್ಲಾ, ರಾಜ್ಯ ಹಾಗೂ ರಾಷ್ಟ್ರಮಟ್ಟದ ಕ್ರೀಡಾಕೂಟಗಳು ನಡೆಯುತ್ತವೆ. ಸ್ವಾತಂತ್ರ್ಯೋತ್ಸವ, ಗಣರಾಜ್ಯೋತ್ಸವ ಹಾಗೂ ಕನ್ನಡ ರಾಜ್ಯೋತ್ಸವದಂತಹ ಸರ್ಕಾರಿ ಕಾರ್ಯಕ್ರಮಗಳಿಗೂ ಮೈದಾನ ಬಳಕೆಯಾಗುತ್ತಿದೆ. ಹೀಗಾಗಿ ಕಾಮಗಾರಿ ಸ್ಥಗಿತಗೊಳಿಸಿ, ಕ್ರೀಡಾ ಸಂಘಟನೆಗಳು, ತರಬೇತುದಾರರು, ಕ್ರೀಡಾಪಟುಗಳು ಹಾಗೂ ತಜ್ಞರೊಂದಿಗೆ ಸಮಾಲೋಚನೆ ನಡೆಸಬೇಕು ಎಂದು ಪ್ರತಿಭಟನಾಕಾರರು ಆಗ್ರಹಿಸಿದರು.

ಟರ್ಫ್ ನಿರ್ಮಾಣವಾದರೆ ಶಾಟ್‌ಪುಟ್, ಡಿಸ್ಕಸ್ ಥ್ರೋ, ಜಾವೆಲಿನ್ ಥ್ರೋ, ಹ್ಯಾಮರ್ ಥ್ರೋ ಸೇರಿದಂತೆ ಅಥ್ಲೆಟಿಕ್ಸ್‌ನ ವಿವಿಧ ಎಸೆತ ವಿಭಾಗಗಳ ತರಬೇತಿ ಹಾಗೂ ಸ್ಪರ್ಧೆಗಳಿಗೆ ಸ್ಥಳಾವಕಾಶದ ಸಮಸ್ಯೆ ಎದುರಾಗಲಿದೆ. ಗ್ರಾಮೀಣ ಭಾಗದ ಕ್ರೀಡಾಪಟುಗಳು ಶಾಲಾ-ಕಾಲೇಜುಗಳ ಮೈದಾನಗಳನ್ನು ಅವಲಂಬಿಸಬೇಕಾಗುತ್ತದೆ ಎಂದು ಪ್ರತಿಭಟನಾಕಾರರು ಆತಂಕ ವ್ಯಕ್ತಪಡಿಸಿದರು.

ಫುಟ್‌ಬಾಲ್ ಮೈದಾನ ನಿರ್ಮಾಣ ಅನಿವಾರ್ಯವಾಗಿದ್ದರೆ, ಸಿಂಥೆಟಿಕ್ ಟರ್ಫ್ ಬದಲಿಗೆ ನೈಸರ್ಗಿಕ ಹುಲ್ಲಿನ ಗ್ರಾಸ್ ಮೈದಾನ ನಿರ್ಮಿಸುವ ಸಾಧ್ಯತೆಯನ್ನು ಪರಿಶೀಲಿಸಬೇಕು ಎಂದು ಅವರು ಒತ್ತಾಯಿಸಿದರು.

> ಜಿಲ್ಲಾ ಕ್ರೀಡಾಂಗಣದಲ್ಲಿ ನಡೆಯುತ್ತಿರುವ ಟರ್ಫ್ ಕಾಮಗಾರಿಯನ್ನು ತಕ್ಷಣ ಸ್ಥಗಿತಗೊಳಿಸಬೇಕು. ಕ್ರೀಡಾ ಸಂಘಟನೆಗಳು ಹಾಗೂ ಕ್ರೀಡಾಪಟುಗಳ ಸಭೆ ಕರೆದು ಅಭಿಪ್ರಾಯ ಸಂಗ್ರಹಿಸಿ, ಎಲ್ಲ ಕ್ರೀಡೆಗಳಿಗೂ ತೊಂದರೆಯಾಗದಂತೆ ಸಮಗ್ರ ಕ್ರೀಡಾಂಗಣ ಯೋಜನೆ ರೂಪಿಸಬೇಕು.
> - ಅರವಿಂದ ಹುಲ್ಲೂರ

> ಫುಟ್‌ಬಾಲ್‌ಗೆ ಅಗತ್ಯ ಸೌಲಭ್ಯ ಕಲ್ಪಿಸುವುದಕ್ಕೆ ನಮ್ಮ ವಿರೋಧವಿಲ್ಲ. ಆದರೆ, ಎಲ್ಲ ಕ್ರೀಡೆಗಳ ತರಬೇತಿ ಹಾಗೂ ಸ್ಪರ್ಧೆಗಳಿಗೆ ಬಳಕೆಯಾಗುತ್ತಿರುವ ಬಹುಉದ್ದೇಶದ ಜಿಲ್ಲಾ ಕ್ರೀಡಾಂಗಣವನ್ನು ಒಂದೇ ಕ್ರೀಡೆಗೆ ಸೀಮಿತಗೊಳಿಸುವುದು ಸರಿಯಲ್ಲ. ಟರ್ಫ್‌ನಿಂದ ಇತರ ಕ್ರೀಡೆಗಳಿಗೆ ಆಗುವ ತೊಂದರೆಯನ್ನು ಪರಿಗಣಿಸಿ, ಕಾಮಗಾರಿ ಸ್ಥಗಿತಗೊಳಿಸಿ ಸಮಗ್ರ ಯೋಜನೆ ರೂಪಿಸಬೇಕು.
> - ರಾಜೂ ಖಾನಪ್ಪನವರ

## ರಾಜ್ಯದ ನಂ.1 ಕಾಲೇಜಿನ ಬೆಳ್ಳಿ ಹಬ್ಬಕ್ಕೆ ಅದ್ಧೂರಿ ಸಿದ್ಧತೆ



**ವಿಜಯಸಾಕ್ಷಿ ಸುದ್ದಿ, ಗದಗ**

ಶಾಸಕರು ಹಾಗೂ ಕಾಲೇಜು ಅಭಿವೃದ್ಧಿ ಸಮಿತಿ ಅಧ್ಯಕ್ಷರಾದ ಎಚ್.ಕೆ. ಪಾಟೀಲ ಅವರ ಮಾರ್ಗದರ್ಶನ ಮತ್ತು ನೇತೃತ್ವದಲ್ಲಿ ನಗರದ ಸರಕಾರಿ ಪದವಿ ಪೂರ್ವ ಕಾಲೇಜು ರಾಜ್ಯದ ಅತ್ಯುತ್ತಮ ಕಾಲೇಜುಗಳ ಸಾಲಿನಲ್ಲಿ ಗುರುತಿಸಿಕೊಂಡಿರುವುದು ಹೆಮ್ಮೆಯ ಸಂಗತಿ. ಅದರಲ್ಲೂ 2025 26ನೇ ಶೈಕ್ಷಣಿಕ ಸಾಲಿನ ರಾಜ್ಯದ ಎಲ್ಲ ಸರಕಾರಿ ಪದವಿ ಪೂರ್ವ ಕಾಲೇಜುಗಳ ದ್ವಿತೀಯ ಪಿಯುಸಿ ಫಲಿತಾಂಶದಲ್ಲಿ ಸರಕಾರಿ ಪದವಿ ಪೂರ್ವ ಕಾಲೇಜು, ಸಿದ್ಧಲಿಂಗ ನಗರ, ಗದಗ ರಾಜ್ಯಕ್ಕೆ ಪ್ರಥಮ ಸ್ಥಾನ ಪಡೆದಿರುವುದು ಕಾಲೇಜಿನ ಬೆಳ್ಳಿ ಹಬ್ಬದ ಸಂಭ್ರಮಕ್ಕೆ ಮತ್ತಷ್ಟು ಮೆರಗು ತಂದಿದೆ ಎಂದು ಜಿಲ್ಲಾ ಪಂಚಾಯಿತಿ ಮಾಜಿ ಅಧ್ಯಕ್ಷರು ಹಾಗೂ ಕಾಲೇಜು ಅಭಿವೃದ್ಧಿ ಸಮಿತಿ ಉಪಾಧ್ಯಕ್ಷ ಸಿದ್ಧಲಿಂಗೇಶ್ವರ ಪಾಟೀಲ ಹೇಳಿದರು.

ನಗರದ ಸರಕಾರಿ ಪದವಿ ಪೂರ್ವ ಕಾಲೇಜಿನಲ್ಲಿ ಆಯೋಜಿಸಿದ್ದ ಬೆಳ್ಳಿ ಹಬ್ಬದ ಪೂರ್ವಭಾವಿ ಸಭೆಯಲ್ಲಿ ಮಾತನಾಡಿದ ಅವರು, ಕಾಲೇಜು 25 ವರ್ಷಗಳ ಶೈಕ್ಷಣಿಕ ಪಯಣದಲ್ಲಿ ಸಾಧಿಸಿರುವ ಯಶಸ್ಸು ಹಾಗೂ ಹೆಗ್ಗಳಿಕೆಯನ್ನು ಸ್ಮರಿಸಿ, ಬೆಳ್ಳಿ ಹಬ್ಬವನ್ನು ಅರ್ಥಪೂರ್ಣವಾಗಿ ಹಾಗೂ ಅದ್ಧೂರಿಯಾಗಿ ಆಚರಿಸಲು ಎಲ್ಲರೂ ಕೈಜೋಡಿಸಬೇಕು ಎಂದು ಕರೆ ನೀಡಿದರು.

ಬೆಳ್ಳಿ ಹಬ್ಬದ ಪೂರ್ವತಯಾರಿಗಾಗಿ ಪ್ರತಿ ಶನಿವಾರ ಸಂಜೆ 4 ಗಂಟೆಗೆ ಪೂರ್ವಭಾವಿ ಸಭೆ ಹಮ್ಮಿಕೊಳ್ಳಲಾಗುವುದು. ಕಾಲೇಜಿನ ಹಳೆಯ ವಿದ್ಯಾರ್ಥಿಗಳು, ಶಿಕ್ಷಣ ಪ್ರೇಮಿಗಳು, ಕಾಲೇಜಿನಲ್ಲಿ ಈ ಹಿಂದೆ ಸೇವೆ ಸಲ್ಲಿಸಿರುವ ಎಲ್ಲ ಪ್ರಾಚಾರ್ಯರು ಹಾಗೂ ಉಪನ್ಯಾಸಕರು ಬೆಳ್ಳಿ ಹಬ್ಬದ ಪೂರ್ವತಯಾರಿಯಲ್ಲಿ ಸಕ್ರಿಯವಾಗಿ ಭಾಗವಹಿಸಿ, ರಾಜ್ಯದ ಮಾದರಿ ಕಾಲೇಜಿನ 25 ವರ್ಷಗಳ ಶೈಕ್ಷಣಿಕ ಸಾಧನೆಯನ್ನು ಒಗ್ಗಟ್ಟಿನಿಂದ ಸಂಭ್ರಮಿಸೋಣ ಎಂದು ಅವರು ಹೇಳಿದರು.

ಸಭೆಯಲ್ಲಿ ವಿಶ್ರಾಂತ ಪ್ರಾಚಾರ್ಯ ಚಂದ್ರಶೇಖರ ವಸ್ತ್ರದ, ಪ್ರಾಚಾರ್ಯೆ ಪೂರ್ಣಿಮಾ ಹೊಸಮನಿ, ಕಾಲೇಜು ಅಭಿವೃದ್ಧಿ ಸಮಿತಿ ಸದಸ್ಯರು ಹಾಗೂ ಕಾಲೇಜಿನ ಬೋಧಕ ಮತ್ತು ಬೋಧಕೇತರ ಸಿಬ್ಬಂದಿ ಉಪಸ್ಥಿತರಿದ್ದರು.

> ಕಾಲೇಜು 25 ವರ್ಷಗಳ ಶೈಕ್ಷಣಿಕ ಪಯಣದಲ್ಲಿ ಸಾಧಿಸಿರುವ ಯಶಸ್ಸು ಹಾಗೂ ಹೆಗ್ಗಳಿಕೆಯನ್ನು ಸ್ಮರಿಸಿ, ಬೆಳ್ಳಿ ಹಬ್ಬವನ್ನು ಅರ್ಥಪೂರ್ಣವಾಗಿ ಹಾಗೂ ಅದ್ಧೂರಿಯಾಗಿ ಆಚರಿಸೋಣ. ಹಳೆಯ ವಿದ್ಯಾರ್ಥಿಗಳು, ಶಿಕ್ಷಣ ಪ್ರೇಮಿಗಳು ಹಾಗೂ ಮಾಜಿ ಪ್ರಾಚಾರ್ಯರು, ಉಪನ್ಯಾಸಕರು ಎಲ್ಲರೂ ಕೈಜೋಡಿಸಬೇಕು.
> - ಸಿದ್ಧಲಿಂಗೇಶ್ವರ ಪಾಟೀಲ, ಮಾಜಿ ಜಿಪಂ ಅಧ್ಯಕ್ಷರು, ಉಪಾಧ್ಯಕ್ಷರು, ಕಾಲೇಜು ಅಭಿವೃದ್ಧಿ ಸಮಿತಿ

# ಸೆ.19ರಂದು ರಾಷ್ಟ್ರೀಯ ಲೋಕ ಅದಾಲತ್

**ವಿಜಯಸಾಕ್ಷಿ ಸುದ್ದಿ, ಗದಗ**

ಗದಗ ಜಿಲ್ಲೆಯಲ್ಲಿ ಸೆ.19ರಂದು ರಾಷ್ಟ್ರೀಯ ಲೋಕ ಅದಾಲತ್ ಆಯೋಜಿಸಲಾಗಿದ್ದು, ನ್ಯಾಯಾಲಯಗಳಲ್ಲಿ ಬಾಕಿಯಿರುವ ವ್ಯಾಜ್ಯಗಳನ್ನು ರಾಜಿ ಸಂಧಾನದ ಮೂಲಕ ತ್ವರಿತವಾಗಿ ಇತ್ಯರ್ಥಪಡಿಸಿಕೊಳ್ಳಲು ಸಾರ್ವಜನಿಕರು ಈ ಅವಕಾಶವನ್ನು ಸದುಪಯೋಗಪಡಿಸಿಕೊಳ್ಳಬೇಕು ಎಂದು ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶೆ ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಅಧ್ಯಕ್ಷೆ ನಾಗವೇಣಿ ಕರೆ ನೀಡಿದರು.

ಗದಗ ನಗರದ ಜಿಲ್ಲಾ ನ್ಯಾಯಾಲಯದ ಕಾನ್ಫರೆನ್ಸ್ ಹಾಲ್‌ನಲ್ಲಿ ಬುಧವಾರ ನಡೆದ ರಾಷ್ಟ್ರೀಯ ಲೋಕ ಅದಾಲತ್ ಕುರಿತು ಪತ್ರಿಕಾಗೋಷ್ಠಿಯಲ್ಲಿ ಅವರು ಮಾತನಾಡಿದರು.

ಲೋಕ ಅದಾಲತ್‌ನಲ್ಲಿ ರಾಜಿ ಸಂಧಾನದ ಮೂಲಕ ಪ್ರಕರಣ ಇತ್ಯರ್ಥವಾದರೆ, ನ್ಯಾಯಾಲಯಕ್ಕೆ ಪಾವತಿಸಿದ ಶುಲ್ಕವನ್ನು ಸಂಪೂರ್ಣವಾಗಿ ಮರುಪಾವತಿಸಲಾಗುತ್ತದೆ. ಅಲ್ಲದೆ, ರಾಜಿ ಮೂಲಕ ಪ್ರಕರಣ ಇತ್ಯರ್ಥಗೊಂಡ ಬಳಿಕ ಉಭಯ ಪಕ್ಷಗಾರರಿಗೆ ಮೇಲ್ಮನವಿ ಸಲ್ಲಿಸಲು ಅವಕಾಶವಿರುವುದಿಲ್ಲ. ಇದರಿಂದ ಪ್ರಕರಣ ಶಾಶ್ವತವಾಗಿ ಮುಕ್ತಾಯಗೊಳ್ಳುವುದರೊಂದಿಗೆ ಸಮಯ ಹಾಗೂ ಆರ್ಥಿಕ ಹೊರೆಯನ್ನು ತಪ್ಪಿಸಿಕೊಳ್ಳಬಹುದು ಮತ್ತು ಉಭಯ ಪಕ್ಷಗಾರರು ತಮ್ಮ ಹಿಂದಿನ ಬಾಂಧವ್ಯ ಉಳಿಸಿಕೊಳ್ಳಲು ಸಹಕಾರಿಯಾಗುತ್ತದೆ ಎಂದು ತಿಳಿಸಿದರು.

ಗದಗ ಜಿಲ್ಲೆಯಲ್ಲಿ ಒಟ್ಟು 22,229 ವಿವಿಧ ಚಾಲ್ತಿ ಪ್ರಕರಣಗಳಿದ್ದು, ಅವುಗಳಲ್ಲಿ ರಾಜೀ ಮೂಲಕ ಇತ್ಯರ್ಥಪಡಿಸಬಹುದಾದ 4,090 ಪ್ರಕರಣಗಳನ್ನು ಈಗಾಗಲೇ ಗುರುತಿಸಲಾಗಿದೆ. ಸಿವಿಲ್ ದಾವೆಗಳು,



ಜಮೀನು, ಮನೆ ಹಾಗೂ ನಿವೇಶನ ವ್ಯಾಜ್ಯಗಳು, ಭೂಸ್ವಾಧೀನ ಪ್ರಕರಣಗಳು, ಬ್ಯಾಂಕ್ ವಸೂಲಾತಿ ಪ್ರಕರಣಗಳು, ದರಖಾಸ್ತು ಅರ್ಜಿಗಳು, ಕಾರ್ಮಿಕ ಪ್ರಕರಣಗಳು, ಮರಳು ಕಳ್ಳಸಾಗಣೆ ಪ್ರಕರಣಗಳು, ಚೆಕ್‌ಬೌನ್ಸ್, ಮೋಟರ್ ವಾಹನ ಅಪಘಾತ, ವೈವಾಹಿಕ ಪ್ರಕರಣಗಳು ಹಾಗೂ ರಾಜೀಗೆ ಅರ್ಹವಾದ ಕ್ರಿಮಿನಲ್ ಕಂಪೌಂಡೆಬಲ್ ಪ್ರಕರಣಗಳು ಇದರಲ್ಲಿ ಸೇರಿವೆ.

ಕಳೆದ ಜುಲೈನಲ್ಲಿ ನಡೆದ ಲೋಕ ಅದಾಲತ್‌ನಲ್ಲಿ 3,647 ಚಾಲ್ತಿ ಪ್ರಕರಣಗಳು ಹಾಗೂ 75,808 ವ್ಯಾಜ್ಯಪೂರ್ವ ಪ್ರಕರಣಗಳು ಸೇರಿದಂತೆ ಒಟ್ಟು 79,455 ಪ್ರಕರಣಗಳನ್ನು ರಾಜಿ ಮೂಲಕ ಇತ್ಯರ್ಥಪಡಿಸಲಾಗಿದೆ. ಇದರಲ್ಲಿ 11 ಕೌಟುಂಬಿಕ ಪ್ರಕರಣಗಳಲ್ಲಿ ದಂಪತಿಗಳನ್ನು ಪುನಃ ಒಂದುಗೂಡಿಸಿ ಕಳುಹಿಸಲಾಗಿದೆ.

ಪತ್ರಿಕಾಗೋಷ್ಠಿಯಲ್ಲಿ ಹಿರಿಯ ದಿವಾಣಿ ನ್ಯಾಯಾಧೀಶ ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಸಿ.ಎಸ್. ಶಿವನಗೌಡ್ರ ಹಾಗೂ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ಸಹಾಯಕ ನಿರ್ದೇಶಕ ವಸಂತ ಮಡ್ಲೂರ ಉಪಸ್ಥಿತರಿದ್ದರು.

## 3.78 ಕೋಟಿ ವೆಚ್ಚದಲ್ಲಿ ರಾಜ್ಯಾದ್ಯಂತ 12 ಸಾವಿರ ಅಜೋಲಾ ಘಟಕಗಳ ಸ್ಥಾಪನೆಗೆ ಚಾಲನೆ

# ಬರದ ನಡುವೆಯೇ ಜಾನುವಾರುಗಳಿಗೆ 'ಅಜೋಲಾ' ಪೌಷ್ಟಿಕ ಮೇವು!

**ವಿಜಯಸಾಕ್ಷಿ ಸುದ್ದಿ, ಬೆಂಗಳೂರು/ ಗದಗ**

ಮಳೆಯ ಅಭಾವ, ಹಸಿರು ಮೇವಿನ ಕೊರತೆ ಹಾಗೂ ಹವಾಮಾನ ವೈಪರೀತ್ಯದಿಂದ ಜಾನುವಾರು ಸಾಕಣೆದಾರರು ಸಂಕಷ್ಟ ಎದುರಿಸುತ್ತಿರುವ ಸಂದರ್ಭದಲ್ಲಿ, ಜಾನುವಾರುಗಳಿಗೆ ಸ್ಥಳೀಯವಾಗಿಯೇ ಪೌಷ್ಟಿಕ ಪೂರಕ ಮೇವು ಒದಗಿಸುವ ಉದ್ದೇಶದಿಂದ ರಾಜ್ಯ ಸರ್ಕಾರ ಮಹತ್ವದ ಹೆಜ್ಜೆ ಇಟ್ಟಿದೆ. ಪಶುಪಾಲನಾ ಮತ್ತು ಪಶುವೈದ್ಯಕೀಯ ಸೇವೆಗಳ ಇಲಾಖೆ ರಾಜ್ಯದಾದ್ಯಂತ 3.78 ಕೋಟಿ ವೆಚ್ಚದಲ್ಲಿ 12,000 ಅಜೋಲಾ ಉತ್ಪಾದನಾ ಘಟಕಗಳನ್ನು ಸ್ಥಾಪಿಸಲು ಮುಂದಾಗಿದೆ.

ಜಾನುವಾರುಗಳಿಗೆ, ಅದರಲ್ಲೂ ಹಾಲು ನೀಡುವ ದನ-ಕರುಗಳಿಗೆ ಅಗತ್ಯವಾದ ಪ್ರೋಟೀನ್, ಖನಿಜಾಂಶ ಸೇರಿದಂತೆ ಹಲವು ಪೌಷ್ಟಿಕಾಂಶಗಳನ್ನು ಹೊಂದಿರುವ ಅಜೋಲಾವನ್ನು ಪೂರಕ ಆಹಾರವಾಗಿ ಬಳಸಬಹುದಾಗಿದೆ.

ಹಸಿರು ಮೇವಿನ ಕೊರತೆಯ ಸಂದರ್ಭದಲ್ಲಿ ರೈತರಿಗೆ ಕಡಿಮೆ ವೆಚ್ಚದಲ್ಲಿ ಲಭ್ಯವಾಗುವ ಪರ್ಯಾಯ ಪೌಷ್ಟಿಕ ಮೇವಾಗಿ ಅಜೋಲಾ ನೆರವಾಗಲಿದೆ.

ರಾಜ್ಯದ 31 ಜಿಲ್ಲೆಗಳ 240 ತಾಲ್ಲೂಕುಗಳಲ್ಲಿ ಈ ಯೋಜನೆ ಅನುಷ್ಠಾನಗೊಳ್ಳಲಿದ್ದು, ಜಿಲ್ಲಾವಾರು ಭೌತಿಕ ಮತ್ತು ಆರ್ಥಿಕ ಗುರಿ ನಿಗದಿಪಡಿಸಲಾಗಿದೆ. ಪ್ರತಿ ಅಜೋಲಾ ಘಟಕಕ್ಕೆ




ಗರಿಷ್ಠ 3,150 ವೆಚ್ಚ ಅಂದಾಜಿಸಲಾಗಿದೆ.

ಬಾಗಲಕೋಟೆ ಮತ್ತು ತುಮಕೂರು ಜಿಲ್ಲೆಗಳಿಗೆ ತಲಾ 500, ಚಿಕ್ಕಮಗಳೂರು, ದಕ್ಷಿಣ ಕನ್ನಡ ಹಾಗೂ ಮೈಸೂರು ಜಿಲ್ಲೆಗಳಿಗೆ ತಲಾ 450 ಘಟಕಗಳನ್ನು ಹಂಚಿಕೆ ಮಾಡಲಾಗಿದೆ. ಬೀದರ್, ಚಿಕ್ಕಬಳ್ಳಾಪುರ, ಧಾರವಾಡ, ಹಾಸನ, ಹಾವೇರಿ ಹಾಗೂ ರಾಯಚೂರು ಜಿಲ್ಲೆಗಳಿಗೆ ತಲಾ 400 ಘಟಕಗಳು; ಕೊಪ್ಪಳ, ಮಂಡ್ಯ, ಶಿವಮೊಗ್ಗ ಹಾಗೂ ಉಡುಪಿ ಜಿಲ್ಲೆಗಳಿಗೆ ತಲಾ 350 ಘಟಕಗಳನ್ನು ನಿಗದಿಪಡಿಸಲಾಗಿದೆ.

ಚಿತ್ರದುರ್ಗ, ದಾವಣಗೆರೆ, ಕೋಲಾರ, ವಿಜಯನಗರ ಹಾಗೂ ಯಾದಗಿರಿ ಜಿಲ್ಲೆಗಳಿಗೆ ತಲಾ 300; ಬೆಂಗಳೂರು ನಗರ, ಬಳ್ಳಾರಿ, ಚಾಮರಾಜನಗರ, ಕೊಡಗು ಹಾಗೂ ರಾಮನಗರ ಜಿಲ್ಲೆಗಳಿಗೆ ತಲಾ 250 ಘಟಕಗಳ ಗುರಿ ನೀಡಲಾಗಿದೆ. ಬೆಂಗಳೂರು ಗ್ರಾಮಾಂತರ ಜಿಲ್ಲೆಗೆ 200 ಘಟಕಗಳನ್ನು ಸ್ಥಾಪಿಸಲು ಉದ್ದೇಶಿಸಲಾಗಿದೆ.

**ಕಡಿಮೆ ಜಾಗ, ಕಡಿಮೆ ವೆಚ್ಚದಲ್ಲೇ ಘಟಕ :**

ಅಜೋಲಾ ಘಟಕಗಳನ್ನು ರೈತರ ಮನೆ ಅಥವಾ ಕೊಟ್ಟಿಗೆಯ ಸಮೀಪವೇ ಕಡಿಮೆ ಜಾಗದಲ್ಲಿ ನಿರ್ಮಿಸಬಹುದಾಗಿದೆ. ಸುಮಾರು 10 ಅಡಿ ಉದ್ದ, 4 ಅಡಿ ಅಗಲ ಹಾಗೂ 1 ಅಡಿ ಆಳದ ಘಟಕವನ್ನು ನಿರ್ಮಿಸಲಾಗುತ್ತದೆ.

ಪ್ರತಿ ಘಟಕದ 3,150 ವೆಚ್ಚದಲ್ಲಿ ಯುವಿ–ಸ್ಟೆಬಿಲೈಸ್ಡ್ ಎಚ್‌ಡಿಪಿಇ ಶೀಟ್‌ಗೆ 1,350, ನೆರಳು ಬಲೆ ಹಾಗೂ ಬಿದಿರು/ಜಿಐ ಫ್ರೇಮ್‌ಗೆ 650, ಫಲವತ್ತಾದ ಮಣ್ಣು, ಸಗಣಿ ಮತ್ತು ಸೂಪರ್ ಫಾಸ್ಫೇಟ್ ಮಿಶ್ರಣಕ್ಕೆ 250 ಹಾಗೂ ಎರಡು ಕೆ.ಜಿ. ಅಜೋಲಾ ತಳಿ/ಬೀಜಕ್ಕೆ 200 ವೆಚ್ಚವಾಗಲಿದೆ. ಸಾಮಗ್ರಿಗಳಿಗೆ 2,450 ಹಾಗೂ ಸ್ಥಳ ಸಿದ್ಧತೆ, ತೊಟ್ಟಿ ಅಳವಡಿಕೆ, ಸಂರಕ್ಷಣೆ ಮತ್ತು ಬೀಜ ಬಿತ್ತನೆಗೆ ಎರಡು ಮಾನವ ದಿನಗಳ ಕೂಲಿ ವೆಚ್ಚವಾಗಿ 700 ನಿಗದಿಪಡಿಸಲಾಗಿದೆ.

**ಸ್ವಚ್ಛ ನೀರಿರುವ ಸ್ಥಳಕ್ಕಷ್ಟೇ ಆದ್ಯತೆ :**

ಜಿಲ್ಲೆಗೆ ನಿಗದಿಪಡಿಸಿದ ಗುರಿಯನ್ನು ತಾಲ್ಲೂಕು ಹಾಗೂ ಗ್ರಾಮ ಪಂಚಾಯಿತಿವಾರು ಹಂಚಿಕೆ ಮಾಡಿ, ಸೂಕ್ತ ಸ್ಥಳ ಮತ್ತು ನೀರಿನ ಲಭ್ಯತೆ ಹೊಂದಿರುವ ಜಾನುವಾರು ಸಾಕಣೆದಾರರನ್ನು ಆದ್ಯತೆಯ ಮೇರೆಗೆ ಆಯ್ಕೆ ಮಾಡಲಾಗುತ್ತದೆ. ಕಲುಷಿತ ನೀರಿನಲ್ಲಿ ಅಜೋಲಾ ಬೆಳೆಸುವುದರಿಂದ ಮಾಲಿನ್ಯಕಾರಕಗಳ ಅಪಾಯ ಇರುವ ಹಿನ್ನೆಲೆಯಲ್ಲಿ ಸ್ವಚ್ಛ ನೀರಿನ ಲಭ್ಯತೆ ಇರುವ ಸ್ಥಳಗಳನ್ನಷ್ಟೇ ಆಯ್ಕೆ ಮಾಡಲಾಗುತ್ತದೆ.

ಫಲಾನುಭವಿಗಳಿಗೆ ಅಜೋಲಾ ಉತ್ಪಾದನೆ, ಕೊಯ್ಲು, ಸ್ವಚ್ಛತೆ, ಸಂಸ್ಕರಣೆ ಹಾಗೂ ಜಾನುವಾರುಗಳಿಗೆ ನೀಡುವ ವಿಧಾನ ಕುರಿತು ತಾಂತ್ರಿಕ ತರಬೇತಿ ನೀಡಲಾಗುತ್ತದೆ. ಯೋಜನೆಯನ್ನು VB-G RAM G ಮಾರ್ಗಸೂಚಿಗಳು ಹಾಗೂ ಗ್ರಾಮ ಪಂಚಾಯಿತಿ ಅಭಿವೃದ್ಧಿ ಯೋಜನೆಗೆ ಒಳಪಟ್ಟು ಅನುಷ್ಠಾನಗೊಳಿಸಲಾಗುತ್ತದೆ.

ಪ್ರತಿ ಘಟಕದ ಫಲಾನುಭವಿಯ ವಿವರ, ಆಧಾರ್, ಜಿಪಿಎಸ್ ಸ್ಥಳ ಹಾಗೂ ಘಟಕದ ಕಾರ್ಯನಿರ್ವಹಣೆಯ ಮೊದಲು ಮತ್ತು ನಂತರದ ಛಾಯಾಚಿತ್ರಗಳನ್ನು ಕಡ್ಡಾಯವಾಗಿ ದಾಖಲಿಸಲಾಗುತ್ತದೆ. ಜಿಲ್ಲಾ ಉಪನಿರ್ದೇಶಕರು ಮಾಸಿಕ ವೇಳಾಪಟ್ಟಿ ಸಿದ್ಧಪಡಿಸಿ ಯೋಜನೆ ಅನುಷ್ಠಾನಗೊಳಿಸಲಿದ್ದು, ಪ್ರತಿ ತಿಂಗಳ 5ರೊಳಗೆ ಪ್ರಗತಿ ವರದಿಯನ್ನು ರಾಜ್ಯ ಕಚೇರಿಗೆ ಸಲ್ಲಿಸುವಂತೆ ಪಶುಪಾಲನಾ ಮತ್ತು ಪಶುವೈದ್ಯಕೀಯ ಸೇವೆಗಳ ಇಲಾಖೆಯ ಆಯುಕ್ತರು ಸೂಚಿಸಿದ್ದಾರೆ.

**ಅಜೋಲಾ ಯೋಜನೆಯ ಪ್ರಮುಖ ಅಂಶಗಳು**

- ಒಟ್ಟು ವೆಚ್ಚ: 3.78 ಕೋಟಿ
- ಒಟ್ಟು ಘಟಕಗಳು: 12,000
- ಜಿಲ್ಲೆಗಳು: 31
- ತಾಲ್ಲೂಕುಗಳು: 240
- ಪ್ರತಿ ಘಟಕದ ವೆಚ್ಚ: 3,150
- ಗದಗ ಜಿಲ್ಲೆಯ ಗುರಿ: 350 ಘಟಕ
- ಗದಗಕ್ಕೆ ಅನುದಾನ: 11.02 ಲಕ್ಷ
- ಘಟಕದ ಗಾತ್ರ: 10 × 4 × 1 ಅಡಿ

**ಗದಗ ಜಿಲ್ಲೆಗೆ 350 ಘಟಕ**

ಗದಗ ಜಿಲ್ಲೆಯ ಏಳು ತಾಲ್ಲೂಕುಗಳಿಗೆ 350 ಅಜೋಲಾ ಘಟಕಗಳ ಗುರಿ ನೀಡಲಾಗಿದ್ದು, ಇದಕ್ಕಾಗಿ 11.02 ಲಕ್ಷ ಅನುದಾನ ನಿಗದಿಪಡಿಸಲಾಗಿದೆ. ಇದೇ ರೀತಿ ಬೆಳಗಾವಿ ಜಿಲ್ಲೆಗೆ 750, ವಿಜಯಪುರಕ್ಕೆ 650, ಉತ್ತರ ಕನ್ನಡಕ್ಕೆ 600 ಹಾಗೂ ಕಲಬುರಗಿಗೆ 550 ಘಟಕಗಳ ಗುರಿ ನೀಡಲಾಗಿದೆ.

# ಹಿಂದುಳಿದ ವರ್ಗಗಳ ವಿವಿಧ ನಿಗಮಗಳ ಯೋಜನೆಗಳಿಗೆ ಅರ್ಜಿ ಆಹ್ವಾನ

**ವಿಜಯಸಾಕ್ಷಿ ಸುದ್ದಿ, ಗದಗ**

ಕರ್ನಾಟಕ ಮಡಿವಾಳ ಮಾಚಿದೇವ ಅಭಿವೃದ್ಧಿ ನಿಗಮ, ಕರ್ನಾಟಕ ಅಲೆಮಾರಿ ಮತ್ತು ಅರೆಅಲೆಮಾರಿ ಅಭಿವೃದ್ಧಿ ನಿಗಮ, ಕರ್ನಾಟಕ ಸವಿತಾ ಸಮಾಜ ಅಭಿವೃದ್ಧಿ ನಿಗಮ ಹಾಗೂ ಡಿ.ದೇವರಾಜ ಅರಸು ಹಿಂದುಳಿದ ವರ್ಗಗಳ ಅಭಿವೃದ್ಧಿ ನಿಗಮದಿಂದ 2026–27ನೇ ಸಾಲಿನಲ್ಲಿ ವಿವಿಧ ಸ್ವಯಂ ಉದ್ಯೋಗ, ಶೈಕ್ಷಣಿಕ ಸಾಲ, ನೀರಾವರಿ ಹಾಗೂ ಇತರ ಯೋಜನೆಗಳಡಿ ಸಹಾಯಧನ ಮತ್ತು ಸಾಲ ಸೌಲಭ್ಯ ಪಡೆಯಲು ಅರ್ಜಿಗಳನ್ನು ಆಹ್ವಾನಿಸಲಾಗಿದೆ.

ಅರ್ಹ ಫಲಾನುಭವಿಗಳು ಕಡ್ಡಾಯವಾಗಿ ಸೇವಾ ಸಿಂಧು ಪೋರ್ಟಲ್ ಮೂಲಕ ಆನ್‌ಲೈನ್‌ನಲ್ಲಿ ಅರ್ಜಿ ಸಲ್ಲಿಸಬೇಕು. ಮಡಿವಾಳ ಮಾಚಿದೇವ ಹಾಗೂ ಅಲೆಮಾರಿ ಮತ್ತು ಅರೆಅಲೆಮಾರಿ ಅಭಿವೃದ್ಧಿ ನಿಗಮಗಳ ಯೋಜನೆಗಳಿಗೆ ಸೆ. 27, ಡಿ.ದೇವರಾಜ ಅರಸು ಹಿಂದುಳಿದ ವರ್ಗಗಳ ಅಭಿವೃದ್ಧಿ ನಿಗಮಕ್ಕೆ ಸೆ. 30 ಹಾಗೂ ಸವಿತಾ ಸಮಾಜ ಅಭಿವೃದ್ಧಿ ನಿಗಮದ ಯೋಜನೆಗಳಿಗೆ ಅ.1 ಅರ್ಜಿ ಸಲ್ಲಿಸಲು ಕೊನೆಯ ದಿನವಾಗಿದೆ. ಅರಿವು ಶೈಕ್ಷಣಿಕ ಸಾಲ ಯೋಜನೆಗಳಿಗೆ ಕೊನೆಯ ದಿನಾಂಕ ಇರುವುದಿಲ್ಲ.

**ಮಡಿವಾಳ ಮಾಚಿದೇವ ನಿಗಮದ ಯೋಜನೆಗಳು**

ಮಡಿವಾಳ ಮತ್ತು ಅದರ ಉಪಜಾತಿಗಳಿಗೆ ಸೇರಿದ ಅರ್ಹ ಫಲಾನುಭವಿಗಳಿಗಾಗಿ ಸ್ವಯಂ ಉದ್ಯೋಗ ನೇರಸಾಲ, ಅರಿವು ಶೈಕ್ಷಣಿಕ ಸಾಲ (ನೂತನ ಹಾಗೂ ನವೀಕರಣ), ಆಧುನಿಕ ಲ್ಯಾಂಡ್ರಿ, ಸ್ವಾವಲಂಬಿ ಸಾರಥಿ ಹಾಗೂ ಗಂಗಾ ಕಲ್ಯಾಣ ಯೋಜನೆಗಳನ್ನು ಅನುಷ್ಠಾನಗೊಳಿಸಲಾಗುತ್ತಿದೆ.

ಬೆಂಗಳೂರು ಮತ್ತು ಮೈಸೂರು ನಗರದ ಧೋಬಿ ಘಾಟ್‌ಗಳಲ್ಲಿ ಮಡಿವಾಳ ಸಮಾಜದವರಿಗೆ ವಾಷಿಂಗ್ ಮಷಿನ್, ಡ್ರೈಯರ್, ಐರನಿಂಗ್ ಮಷಿನ್ ಸೇರಿದಂತೆ ಅಗತ್ಯ ಸಾಮಗ್ರಿಗಳನ್ನು ಒಳಗೊಂಡ ತಲಾ ರೂ.75 ಲಕ್ಷ ಘಟಕ ವೆಚ್ಚದಲ್ಲಿ ಆಧುನಿಕ ಲ್ಯಾಂಡ್ರಿ ಸ್ಥಾಪಿಸುವ ಯೋಜನೆಯೂ ಇದೆ. ಗಂಗಾ ಕಲ್ಯಾಣ ಯೋಜನೆಯಡಿ ದಕ್ಷಿಣ ಕನ್ನಡ, ಉಡುಪಿ, ಕೊಡಗು, ಉತ್ತರ ಕನ್ನಡ, ಶಿವಮೊಗ್ಗ, ಚಿಕ್ಕಮಗಳೂರು ಹಾಗೂ ಹಾಸನ ಜಿಲ್ಲೆಗಳಲ್ಲಿ ಕನಿಷ್ಠ ಒಂದು ಎಕರೆ ಹಾಗೂ ಇತರ ಜಿಲ್ಲೆಗಳಲ್ಲಿ ಕನಿಷ್ಠ ಎರಡು ಎಕರೆ ಜಮೀನು ಹೊಂದಿರಬೇಕು.

**ಅಲೆಮಾರಿ ಮತ್ತು ಅರೆಅಲೆಮಾರಿ ಅಭಿವೃದ್ಧಿ ನಿಗಮ**

ಅಲೆಮಾರಿ ಮತ್ತು ಅರೆಅಲೆಮಾರಿ ಹಾಗೂ ಅದರ ಉಪಜಾತಿಗಳಿಗೆ ಸೇರಿದವರಿಗೆ ಸ್ವಯಂ ಉದ್ಯೋಗ ನೇರಸಾಲ, ಅರಿವು ಶೈಕ್ಷಣಿಕ ಸಾಲ (ನೂತನ ಹಾಗೂ ನವೀಕರಣ), ಸ್ವಾವಲಂಬಿ ಸಾರಥಿ ಮತ್ತು ಗಂಗಾ ಕಲ್ಯಾಣ ಯೋಜನೆಗಳಡಿ ಸೌಲಭ್ಯ ಕಲ್ಪಿಸಲಾಗುತ್ತಿದೆ.

ಗಂಗಾ ಕಲ್ಯಾಣ ಯೋಜನೆಯಡಿ ದಕ್ಷಿಣ ಕನ್ನಡ, ಉಡುಪಿ, ಕೊಡಗು, ಉತ್ತರ ಕನ್ನಡ, ಶಿವಮೊಗ್ಗ, ಚಿಕ್ಕಮಗಳೂರು ಹಾಗೂ ಹಾಸನ ಜಿಲ್ಲೆಗಳಲ್ಲಿ ಕನಿಷ್ಠ ಒಂದು ಎಕರೆ ಮತ್ತು ಇತರ ಜಿಲ್ಲೆಗಳಲ್ಲಿ ಕನಿಷ್ಠ ಎರಡು ಎಕರೆ ಜಮೀನು ಹೊಂದಿರಬೇಕು.

**ಸವಿತಾ ಸಮಾಜ ಅಭಿವೃದ್ಧಿ ನಿಗಮ**

ಸವಿತಾ ಮತ್ತು ಅದರ ಉಪಜಾತಿಗಳಿಗೆ ಸೇರಿದ ನಿರುದ್ಯೋಗಿಗಳಿಗೆ ಸ್ವಯಂ ಉದ್ಯೋಗ ಸಾಲ ಯೋಜನೆಯಡಿ ಕೃಷಿ, ವ್ಯಾಪಾರ, ಕೈಗಾರಿಕೆ, ಸಾರಿಗೆ ಹಾಗೂ ಸೇವಾ ವಲಯದ ಆರ್ಥಿಕ ಚಟುವಟಿಕೆಗಳಿಗೆ ಗರಿಷ್ಠ ರೂ.2 ಲಕ್ಷದವರೆಗೆ ಆರ್ಥಿಕ ನೆರವು ನೀಡಲಾಗುತ್ತದೆ.

ರೂ.1 ಲಕ್ಷದವರೆಗಿನ ಸಾಲಕ್ಕೆ ಶೇ.20ರಷ್ಟು, ಗರಿಷ್ಠ ರೂ.20,000 ಸಹಾಯಧನ ಹಾಗೂ ರೂ.1.01 ಲಕ್ಷದಿಂದ ರೂ.2 ಲಕ್ಷದವರೆಗಿನ ಸಾಲಕ್ಕೆ ಶೇ.15ರಷ್ಟು, ಗರಿಷ್ಠ ರೂ.30,000 ಸಹಾಯಧನ ನೀಡಲಾಗುತ್ತದೆ. ಉಳಿದ ಮೊತ್ತವನ್ನು ಶೇ.4ರ ಬಡ್ಡಿದರದಲ್ಲಿ ಸಾಲವಾಗಿ ಒದಗಿಸಲಾಗುತ್ತದೆ.

ಅರಿವು ಶೈಕ್ಷಣಿಕ ಸಾಲ ಯೋಜನೆಯಡಿ ಅಇಖ, ಓಇಇಖ ಮತ್ತಿತರ ಪ್ರವೇಶ ಪರೀಕ್ಷೆಗಳ ಮೂಲಕ ಆಯ್ಕೆಯಾಗಿ ವೃತ್ತಿಪರ ಕೋರ್ಸ್‌ಗಳಲ್ಲಿ ವ್ಯಾಸಂಗ ಮಾಡುವವರಿಗೆ ವಾರ್ಷಿಕ ರೂ.1 ಲಕ್ಷದಂತೆ ಕೋರ್ಸ್ ಅವಧಿಗೆ ಗರಿಷ್ಠ ರೂ.4ರಿಂದ ರೂ.5 ಲಕ್ಷದವರೆಗೆ ಶೇ.2ರ ಬಡ್ಡಿದರದಲ್ಲಿ ಸಾಲ ನೀಡಲಾಗುತ್ತದೆ. ಕುಟುಂಬದ ವಾರ್ಷಿಕ ಆದಾಯ ರೂ.3.50 ಲಕ್ಷದೊಳಗಿದ್ದು, ವಯೋಮಿತಿ 30 ವರ್ಷ ಮೀರಿರಬಾರದು.

**ಡಿ.ದೇವರಾಜ ಅರಸು ನಿಗಮದ ಯೋಜನೆಗಳು**

ಹಿಂದುಳಿದ ವರ್ಗಗಳ ಪ್ರವರ್ಗ–1, 2ಎ, 3ಎ ಮತ್ತು 3ಬಿಗೆ ಸೇರಿದ ಅರ್ಹರಿಗೆ ಡಿ.ದೇವರಾಜ ಅರಸು ಸ್ವಯಂ ಉದ್ಯೋಗ ವೈಯಕ್ತಿಕ ಸಾಲ, ಗಂಗಾ ಕಲ್ಯಾಣ ನೀರಾವರಿ, ಅರಿವು ಶೈಕ್ಷಣಿಕ ಸಾಲ, ವಿದೇಶಿ ವಿಶ್ವವಿದ್ಯಾಲಯಗಳ ಉನ್ನತ ವ್ಯಾಸಂಗ ಸಾಲ, ಸ್ವಾವಲಂಬಿ ಸಾರಥಿ ಹಾಗೂ ಹೊಲಿಗೆ ಯಂತ್ರ ವಿತರಣಾ ಯೋಜನೆಗಳಡಿ ಸೌಲಭ್ಯ ಕಲ್ಪಿಸಲಾಗುತ್ತಿದೆ.

ಸ್ವಯಂ ಉದ್ಯೋಗ ವೈಯಕ್ತಿಕ ಸಾಲ ಯೋಜನೆಯಡಿ ಗರಿಷ್ಠ ರೂ.2 ಲಕ್ಷದವರೆಗೆ ನೆರವು, ರೂ.1 ಲಕ್ಷದವರೆಗಿನ ಸಾಲಕ್ಕೆ ಶೇ.20ರಷ್ಟು, ಗರಿಷ್ಠ ರೂ.20,000 ಹಾಗೂ ರೂ.1.01 ಲಕ್ಷದಿಂದ ರೂ.2 ಲಕ್ಷದವರೆಗಿನ ಸಾಲಕ್ಕೆ ಶೇ.15ರಷ್ಟು, ಗರಿಷ್ಠ ರೂ.30,000 ಸಹಾಯಧನ ನೀಡಲಾಗುತ್ತದೆ. ಉಳಿದ ಮೊತ್ತವನ್ನು ಶೇ.4ರ ಬಡ್ಡಿದರದಲ್ಲಿ ಸಾಲವಾಗಿ ಒದಗಿಸಲಾಗುತ್ತದೆ.

ಗಂಗಾ ಕಲ್ಯಾಣ ಯೋಜನೆಯಡಿ ಸಣ್ಣ ಮತ್ತು ಅತಿ ಸಣ್ಣ ರೈತರ ಜಮೀನುಗಳಿಗೆ ನೀರಾವರಿ ಸೌಲಭ್ಯ ಒದಗಿಸಲಾಗುತ್ತದೆ. ಬೆಂಗಳೂರು ನಗರ, ಬೆಂಗಳೂರು ಗ್ರಾಮಾಂತರ, ರಾಮನಗರ, ಕೋಲಾರ, ಚಿಕ್ಕಬಳ್ಳಾಪುರ ಹಾಗೂ ತುಮಕೂರು ಜಿಲ್ಲೆಗಳಿಗೆ ಕೊಳವೆಬಾವಿ ಯೋಜನೆಯ ಘಟಕ ವೆಚ್ಚ ರೂ.4.75 ಲಕ್ಷ ಹಾಗೂ ಇತರ ಜಿಲ್ಲೆಗಳಿಗೆ ರೂ.3.75 ಲಕ್ಷ ನಿಗದಿಯಾಗಿದೆ. ವಿದ್ಯುದೀಕರಣಕ್ಕಾಗಿ ಪ್ರತಿ ಕೊಳವೆಬಾವಿಗೆ ರೂ.75,000 ಎಸ್ಕಾಂಗಳಿಗೆ ಪಾವತಿಸಲಾಗುತ್ತದೆ.

**ಸಾಮಾನ್ಯ ಅರ್ಹತೆಗಳು**

ನಿಗಮಗಳ ವಿವಿಧ ಯೋಜನೆಗಳಿಗೆ ಅರ್ಜಿ ಸಲ್ಲಿಸುವವರು ಕರ್ನಾಟಕದ ಖಾಯಂ ನಿವಾಸಿಗಳಾಗಿರಬೇಕು. ಸಂಬಂಧಿತ ನಿಗಮದ ವ್ಯಾಪ್ತಿಗೆ ಬರುವ ಸಮುದಾಯ ಅಥವಾ ಉಪಜಾತಿಗೆ ಸೇರಿದವರಾಗಿದ್ದು, ಚಾಲ್ತಿಯಲ್ಲಿರುವ ಜಾತಿ ಮತ್ತು ಆದಾಯ ಪ್ರಮಾಣ ಪತ್ರ ಹೊಂದಿರಬೇಕು.

ಸಾಮಾನ್ಯವಾಗಿ ಅರ್ಜಿದಾರರ ವಯೋಮಿತಿ 18ರಿಂದ 55 ವರ್ಷಗಳಾಗಿದ್ದು, ಯೋಜನೆಗನುಗುಣವಾಗಿ ವಯೋಮಿತಿಯಲ್ಲಿ ವ್ಯತ್ಯಾಸವಿರುತ್ತದೆ.

ಕುಟುಂಬದ ವಾರ್ಷಿಕ ಆದಾಯ ಗ್ರಾಮೀಣ ಪ್ರದೇಶದಲ್ಲಿ ರೂ.98,000 ಹಾಗೂ ಪಟ್ಟಣ ಪ್ರದೇಶದಲ್ಲಿ ರೂ.1.20 ಲಕ್ಷದೊಳಗಿರಬೇಕು. ಅರಿವು ಯೋಜನೆಗೆ ರೂ.3.50 ಲಕ್ಷ ಹಾಗೂ ವಿದೇಶಿ ವ್ಯಾಸಂಗ ಸಾಲ ಯೋಜನೆಗೆ ರೂ.15 ಲಕ್ಷದವರೆಗೆ ಆದಾಯ ಮಿತಿ ನಿಗದಿಯಾಗಿದೆ.

ಅರ್ಜಿದಾರರ ಮೊಬೈಲ್ ಸಂಖ್ಯೆ ಮತ್ತು ಬ್ಯಾಂಕ್ ಖಾತೆ ಆಧಾರ್ ಸಂಖ್ಯೆಗೆ ಜೋಡಣೆಯಾಗಿರಬೇಕು. ಆಧಾರ್ ಕಾರ್ಡ್‌ನಲ್ಲಿರುವ ಹೆಸರು, ವಿಳಾಸ ಹಾಗೂ ಇತರೆ ದಾಖಲಾತಿಗಳಾದ ಜಾತಿ ಮತ್ತು ಆದಾಯ ಪ್ರಮಾಣ ಪತ್ರ, ಬ್ಯಾಂಕ್ ಪಾಸ್‌ಬುಕ್‌ನಲ್ಲಿರುವ ವಿವರಗಳು ಕಡ್ಡಾಯವಾಗಿ ಹೊಂದಿಕೆಯಾಗಿರಬೇಕು.

ಒಮ್ಮೆ ನಿಗಮದ ಯಾವುದೇ ಯೋಜನೆಯಡಿ ಸೌಲಭ್ಯ ಪಡೆದವರು ಹಾಗೂ ಅವರ ಕುಟುಂಬದವರು ಮತ್ತೊಮ್ಮೆ ಸೌಲಭ್ಯ ಪಡೆಯಲು ಅರ್ಹರಾಗಿರುವುದಿಲ್ಲ.

ಆದರೆ 2024–25 ಮತ್ತು 2025–26ನೇ ಸಾಲಿನಲ್ಲಿ ಅರ್ಜಿ ಸಲ್ಲಿಸಿ ಸೌಲಭ್ಯ ಪಡೆಯದೇ ಇರುವ ಫಲಾಪೇಕ್ಷಿಗಳು ಮತ್ತೆ ಅರ್ಜಿ ಸಲ್ಲಿಸುವ ಅಗತ್ಯವಿಲ್ಲ; ಅವರನ್ನು ಪ್ರಸಕ್ತ ಸಾಲಿಗೂ ಪರಿಗಣಿಸಲಾಗುವುದು. ಹಿಂದಿನ ಸಾಲಿನಲ್ಲಿ ಅರ್ಜಿ ಸಲ್ಲಿಸಿದ ಯೋಜನೆಯನ್ನು ಹೊರತುಪಡಿಸಿ ಉಳಿದ ಯೋಜನೆಗಳಿಗೆ ಅರ್ಜಿ ಸಲ್ಲಿಸಬಹುದು.

ಆಯ್ಕೆ ಸಂದರ್ಭದಲ್ಲಿ ಮಹಿಳೆಯರಿಗೆ ಶೇ.33, ವಿಕಲಚೇತನರಿಗೆ ಶೇ.5 ಹಾಗೂ ತೃತೀಯ ಲಿಂಗಿಗಳಿಗೆ ಶೇ.1ರಷ್ಟು ಮೀಸಲಾತಿ ಕಲ್ಪಿಸಲಾಗಿದೆ.

ಅರ್ಹರು ಗ್ರಾಮ ಒನ್, ಬೆಂಗಳೂರು ಒನ್, ಕರ್ನಾಟಕ ಒನ್, ಅಟಲ್‌ಜಿ ಜನಸ್ನೇಹಿ ಕೇಂದ್ರ ಹಾಗೂ ನಾಗರಿಕ ಸೇವಾ ಕೇಂದ್ರಗಳ ಮೂಲಕ ಸೇವಾ ಸಿಂಧು ಪೋರ್ಟಲ್‌ನಲ್ಲಿ ಅರ್ಜಿ ಸಲ್ಲಿಸಬಹುದು. ಹೆಚ್ಚಿನ ಮಾಹಿತಿಗೆ ಸಂಬಂಧಿಸಿದ ನಿಗಮಗಳ ವೆಬ್‌ಸೈಟ್ ಹಾಗೂ ಗದಗ ಜಿಲ್ಲಾ ಆಡಳಿತ ಭವನದ ರೂಂ ನಂ.202, 2ನೇ ಮಹಡಿಯಲ್ಲಿರುವ ಡಿ.ದೇವರಾಜ ಅರಸು ಹಿಂದುಳಿದ ವರ್ಗಗಳ ಅಭಿವೃದ್ಧಿ ನಿಗಮದ ಜಿಲ್ಲಾ ಕಚೇರಿಯನ್ನು ಬೆಳಿಗ್ಗೆ 10ರಿಂದ ಸಂಜೆ 5.30ರವರೆಗೆ ಸಂಪರ್ಕಿಸಬಹುದು.

## 14 ಭಜನಾ ತಂಡಗಳಿಂದ ಸಡಗರ, ಸಂಭ್ರಮ

# ಹಾಲಗೊಂಡ ಬಸವೇಶ್ವರ ಜಾತ್ರೆಯಲ್ಲಿ ಶಿವಶರಣರ ಭಾವಚಿತ್ರ ಮೆರವಣಿಗೆ



**ವಿಜಯಸಾಕ್ಷಿ ಸುದ್ದಿ, ಲಕ್ಕುಂಡಿ**

ಐತಿಹಾಸಿಕ ಲಕ್ಕುಂಡಿ ಗ್ರಾಮದ ಹಾಲಗೊಂಡ ಬಸವೇಶ್ವರ ಜಾತ್ರೆಯ ಅಂಗವಾಗಿ ಶ್ರಾವಣ ಕೊನೆಯ ಸೋಮವಾರ ಶಿವಶರಣರ ಭಾವಚಿತ್ರ ಹಾಗೂ ಮೂರ್ತಿಗಳ ಅದ್ದೂರಿ ಮೆರವಣಿಗೆ ರಾಜಬೀದಿಯಲ್ಲಿ ಸಡಗರ, ಸಂಭ್ರಮದಿಂದ ನಡೆಯಿತು.

ಶ್ರೀಕೃಷ್ಣ, ಬಸವೇಶ್ವರ, ಶರೀಫಸಾಹೇಬ, ಅಕ್ಕಮಹಾದೇವಿ, ಅಜಗಣ್ಣ, ಮುಕ್ತಾಯಕ್ಕ, ಅಲ್ಲಮಪ್ರಭು, ಅನ್ನದಾನೀಶ್ವರ, ಮಲ್ಲಿಕಾರ್ಜುನ, ಪಂಚಾಚಾರ್ಯ, ಸರ್ವಜ್ಞ, ಮಾರುತಿ ಸೇರಿದಂತೆ ನಾಡಿನ ಹಲವು ಶಿವಶರಣರ ಭಾವಚಿತ್ರ ಹಾಗೂ ಮೂರ್ತಿಗಳನ್ನು ವಿವಿಧ ರೀತಿಯಲ್ಲಿ ಅಲಂಕರಿಸಿದ ವಾಹನಗಳಲ್ಲಿ ಮೆರವಣಿಗೆ ಮಾಡಲಾಯಿತು.

ಶ್ರಾವಣ ಕೊನೆಯ ಸೋಮವಾರ ಭಕ್ತರು ಶ್ರದ್ಧಾ-ಭಕ್ತಿಯಿಂದ ಪಾಲ್ಗೊಂಡರು. 14 ಭಜನಾ ತಂಡಗಳ ಸದಸ್ಯರು ಒಂದೇ ಬಣ್ಣದ ಉಡುಪು ಧರಿಸಿ ಧ್ವನಿವರ್ಧಕದ ಮೂಲಕ ತತ್ವಪದ, ಜನಪದ ಹಾಗೂ ಭಕ್ತಿಗೀತೆಗಳನ್ನು ಹಾಡಿದರು. ನಾಡಿನ ಶಿವಶರಣರ ಜೀವನ ಚರಿತ್ರೆ ಸಾರುವ ಪದಗಳ ಗಾಯನ ಸಾವಿರಾರು ಭಕ್ತರ ಗಮನ ಸೆಳೆಯಿತು. ಉತ್ತಮ ಪದಗಳನ್ನು ಹಾಡಿದ ಕಲಾವಿದರಿಗೆ ಸಾರ್ವಜನಿಕರು ಕಾಣಿಕೆ ನೀಡಿ ಪ್ರೋತ್ಸಾಹಿಸಿದರು.

ಪ್ರತಿ ಭಜನಾ ತಂಡದ ಹಿಂದೆ ಶಿವಶರಣರ ಭಾವಚಿತ್ರ ಹಾಗೂ ಮೂರ್ತಿಗಳನ್ನು ವಾಹನಗಳಲ್ಲಿ ವಿವಿಧ ಹೂವುಗಳಿಂದ ಅಲಂಕರಿಸಲಾಗಿತ್ತು.

ಅಲ್ಲಮಪ್ರಭುದೇವರ ಮಠದ ಭಜನಾ ಸಂಘದ ಮೆರವಣಿಗೆ ಮಂಟಪದಲ್ಲಿ ಅಲ್ಲಮಪ್ರಭುಗಳ ಮೂರ್ತಿಯನ್ನು ಕೇಂದ್ರ ಸ್ಥಾನದಲ್ಲಿರಿಸಿ, ಅವರ ಮುಂದೆ ಅಕ್ಕಮಹಾದೇವಿ ಸೇರಿದಂತೆ ಇತರ ಶರಣರ ಮೂರ್ತಿಗಳನ್ನು ಪ್ರತಿಷ್ಠಾಪಿಸಿದ್ದು ಗಮನ ಸೆಳೆಯಿತು.

ಮಹಾಂತೇಶ್ವರ ಭಜನಾ ಸಂಘವು ವಿಶೇಷ ಬಂಡಿ ಸಿದ್ಧಪಡಿಸಿ ಎತ್ತುಗಳನ್ನು ಮೆರವಣಿಗೆಯಲ್ಲಿ ಅಳವಡಿಸಿತ್ತು. ಬಂಡಿಯಲ್ಲಿ ಸರ್ವಜ್ಞರ ಭಾವಚಿತ್ರವನ್ನು ಮೆರವಣಿಗೆ ಮಾಡಿದ್ದು ವಿಶೇಷ ಆಕರ್ಷಣೆಯಾಗಿತ್ತು.

ಆಂಜನೇಯ ಭಜನಾ ಸಂಘವು ಹಿತ್ತಾಳೆಯ ಮಂಟಪ ನಿರ್ಮಿಸಿ ಅಲಂಕರಿಸಿದ್ದು ಗಮನ ಸೆಳೆಯಿತು. ನಾಗನಾಥ ಭಜನಾ ತಂಡದ ಹೆಚ್ಚಿನ ಸಂಖ್ಯೆಯ ಕಾರ್ಯಕರ್ತರು ಒಂದೇ ಬಣ್ಣದ ಬಿಳಿ ಉಡುಪು ಹಾಗೂ ಕೇಸರಿ ಶಾಲು ಧರಿಸಿದ್ದು ವಿಶೇಷ ಗಮನ ಸೆಳೆಯಿತು.

ಅನ್ನದಾನೀಶ್ವರ, ಮಲ್ಲಿಕಾರ್ಜುನ, ಲೆಕ್ಕದ ವೀರೇಶ್ವರ, ಬಿನ್ನಾಳ ಬಸವೇಶ್ವರ, ನಾಗನಾಥ, ರಾಮಲಿಂಗೇಶ್ವರ, ಪಂಚಾಚಾರ್ಯ, ಬಸವೇಶ್ವರ, ಮಾರುತಿ, ಮಹಾಂತೇಶ್ವರ, ಅಲ್ಲಮಪ್ರಭುದೇವರ, ವಿರುಪಾಕ್ಷೇಶ್ವರ, ಮರುಳಸಿದ್ದೇಶ್ವರ ಹಾಗೂ ಆಂಜನೇಯ ಭಜನಾ ತಂಡ ಮಾರುತಿ ನಗರ ಸೇರಿದಂತೆ 14 ಭಜನಾ ತಂಡಗಳು ಮೆರವಣಿಗೆಯಲ್ಲಿ ಭಾಗವಹಿಸಿದ್ದವು.

ಗ್ರಾಮದ 14 ಭಜನಾ ತಂಡಗಳಿಗೆ ಪ್ರೋತ್ಸಾಹದ ಕಾಣಿಕೆಯಾಗಿ ಗ್ರಾಮ ಪಂಚಾಯಿತಿಯಿಂದ ಸಾಂಪ್ರದಾಯಿಕವಾಗಿ ಗಡಿಯಾರಗಳನ್ನು ನೀಡಲಾಯಿತು.

ಹನುಮಾ ಮಾಲಾ ಸೇವಾ ಸಮಿತಿಯಿಂದ ಐತಿಹಾಸಿಕ ಹಾಲಗೊಂಡ ಬಸವೇಶ್ವರ ದೇವಸ್ಥಾನದ ಭಾವಚಿತ್ರವನ್ನು ಕಾಣಿಕೆಯಾಗಿ ನೀಡಲಾಯಿತು. ಹಜರತ್ ಮೌಲಾಲಿ ಮಸೀದಿಯಿಂದ ಭಜನಾ ಸಂಘಕ್ಕೆ ಭಜನಾ ವಾದ್ಯವನ್ನು ಕಾಣಿಕೆಯಾಗಿ ನೀಡಿದ್ದು ವಿಶೇಷವಾಗಿತ್ತು.

## ಕದಳಿಶ್ರೀ ವೇದಿಕೆಯಿಂದ ಅಮೃತ ಭೋಜನ ಜ್ಞಾನಸಿಂಚನ

# ಪ್ರತಿಭೆ ಬೆಳೆಸಿಕೊಳ್ಳುವ ಅವಕಾಶ ಎಲ್ಲರಿಗೂ ಸಮಾನ

**ವಿಜಯಸಾಕ್ಷಿ ಸುದ್ದಿ, ಗದಗ**

ಎಲ್ಲರಲ್ಲೂ ಸಮಾನ ಪ್ರತಿಭೆ ಇರದಿರಬಹುದು. ಆದರೆ ಪ್ರತಿಭೆಯನ್ನು ಬೆಳೆಸಿಕೊಳ್ಳುವ ಅವಕಾಶ ಎಲ್ಲರಿಗೂ ಸಮಾನವಾಗಿದ್ದು, ಮಕ್ಕಳು ವಿದ್ಯೆಯೊಂದಿಗೆ ನಮ್ರತೆ, ವಿನಯ ಹಾಗೂ ಹಿರಿಯರ ಬಗ್ಗೆ ಗೌರವ ಬೆಳೆಸಿಕೊಳ್ಳಬೇಕು ಎಂದು ಚಿಂತಕಿ ನಿರ್ಮಲಾ ಪಾಟೀಲ ಹೇಳಿದರು.

ಗದಗಿನ ಉರ್ದು ಹಿರಿಯ ಪ್ರಾಥಮಿಕ ಶಾಲೆ ನಂ. 4ರಲ್ಲಿ ಗದಗ ಜಿಲ್ಲಾ ಶರಣ ಸಂಕುಲದ ಶರಣೆ ಅಕ್ಕಮಹಾದೇವಿಯ ಕದಳಿಶ್ರೀ ವೇದಿಕೆ ವತಿಯಿಂದ ಶ್ರಾವಣ ಮಾಸದ ಅಂಗವಾಗಿ ಆಯೋಜಿಸಿದ್ದ 'ಅಮೃತ ಭೋಜನಜ್ಞಾನಸಿಂಚನ' ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

ಮಕ್ಕಳು ಉತ್ತಮ ಸಂಸ್ಕಾರ ಬೆಳೆಸಿಕೊಳ್ಳಬೇಕು. ಟಿ.ವಿ. ಹಾಗೂ ಮೊಬೈಲ್‌ನಿಂದ ದೂರವಿದ್ದು, ಹಸನ್ಮುಖಿಗಳಾಗಿ ಓದಿನಲ್ಲಿ ತೊಡಗಬೇಕು. ಹಿತವಾದ ಆಹಾರ, ಮಿತವಾದ ಮಾತು ಹಾಗೂ ಸಮಯಕ್ಕೆ ಸರಿಯಾಗಿ ನಿದ್ದೆ ಮಾಡುವುದರಿಂದ ಆರೋಗ್ಯ ಸದೃಢವಾಗಿರುತ್ತದೆ ಎಂದರು.

ಚಿಂತಕ ಮಂಜುನಾಥ ಬೇಲೇರಿ ಮಕ್ಕಳಿಗೆ ಸಿಹಿ ಭೋಜನ ಉಣಬಡಿಸಿ ಮಾತನಾಡಿ, ತಂದೆ-ತಾಯಿಗಳು ನಿಜವಾದ ದೇವರು. ಹಿರಿಯರ ಅನುಭವದ ಮಾತುಗಳು ಜೀವನಕ್ಕೆ ದಾರಿದೀಪವಾಗಿದ್ದು, ಅವರ ಮಾರ್ಗದರ್ಶನದಲ್ಲಿ ಮುನ್ನಡೆಯಬೇಕು ಎಂದರು.

ಗದಗ ಡಯಟ್ ಉಪನ್ಯಾಸಕಿ ಸುಧಾ ಬನಿಕಲ್ ಮಾತನಾಡಿ, ಮಕ್ಕಳು ಚಿಕ್ಕ ವಯಸ್ಸಿನಿಂದಲೇ ಉತ್ತಮ ಹವ್ಯಾಸಗಳನ್ನು ರೂಢಿಸಿಕೊಂಡು ಮೌಲ್ಯಾಧಾರಿತ ಬದುಕು ನಡೆಸಬೇಕು ಎಂದರು.

ವೇದಿಕೆಯ ಸಂಚಾಲಕಿ ಕವಿತಾ ದಂಡಿನ ಮಾತನಾಡಿ, ಕದಳಿಶ್ರೀ ವೇದಿಕೆ ಕಳೆದ 20 ವರ್ಷಗಳಿಂದ ಶ್ರಾವಣ ಮಾಸದಲ್ಲಿ ಸರ್ಕಾರಿ



> ಪ್ರತಿಭೆಯನ್ನು ಬೆಳೆಸಿಕೊಳ್ಳಲು ಎಲ್ಲರಿಗೂ ಸಮಾನ ಅವಕಾಶವಿದೆ. ವಿದ್ಯೆಯ ಜತೆಗೆ ಸಂಸ್ಕಾರ, ವಿನಯ ಹಾಗೂ ಹಿರಿಯರ ಬಗ್ಗೆ ಗೌರವವನ್ನು ಮಕ್ಕಳು ಬೆಳೆಸಿಕೊಳ್ಳಬೇಕು.
>
> \- ನಿರ್ಮಲಾ ಪಾಟೀಲ

ಶಾಲೆಗಳಿಗೆ ಸಮುದಾಯವನ್ನು ಕರೆತಂದು ಮಕ್ಕಳಿಗೆ ಹಿತವಚನ ಹಾಗೂ ಭೋಜನ ನೀಡುವ ಕಾರ್ಯಕ್ರಮವನ್ನು ನಿರಂತರವಾಗಿ ನಡೆಸುತ್ತಿದೆ ಎಂದರು.

ಶಾಲಾ ಮುಖ್ಯೋಪಾಧ್ಯಾಯಿನಿ ಖೈರುನ್ನಿಸಾ ದಾವಲಖಾನವರ ಹಾಗೂ ಎಸ್‌ಡಿಎಂಸಿ ಅಧ್ಯಕ್ಷ ಮಾಬೂಬಸುಬಾನಿ ಸವಡಿ ಮಾತನಾಡಿದರು. ಮಕ್ಕಳಿಂದ ಸಾಮೂಹಿಕ ಪ್ರಾರ್ಥನೆ ನಡೆಯಿತು. ಐ.ಎ. ಗಾಡಗೋಳಿ ಸ್ವಾಗತಿಸಿದರು. ಹಸಿನಾ ಮಕಾನದಾರ ನಿರೂಪಿಸಿದರು. ಜೈಕುಮಾರ ವಂದಿಸಿದರು. ಶಿಕ್ಷಕಿಯರಾದ ಎನ್.ಎಚ್. ಜಕ್ಕಲಿ, ಎಸ್.ಎಸ್. ಬಳ್ಳಾರಿ, ಸನಾ ಮುಳ್ಳನವರ ಉಪಸ್ಥಿತರಿದ್ದರು.

## ಸಂಕ್ಷಿಪ್ತ ಸುದ್ದಿಗಳು

# ಮಳೆರಾಯನ ಕೃಪೆಗಾಗಿ ದೇವರು, ಸಂಪ್ರದಾಯದ ಮೊರೆ



**ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ**

ಮುಂಗಾರು ಮಳೆ ಕೈಕೊಟ್ಟು ಭೂಮಿ ಒಣಗುತ್ತಿರುವ ಹಿನ್ನೆಲೆಯಲ್ಲಿ ಉತ್ತಮ ಮಳೆಗಾಗಿ ಹಳ್ಳದಕೇರಿ ಓಣಿಯ ರೈತ ಮಹಿಳೆಯರು ಸಾಂಪ್ರದಾಯಿಕ ಗುರ್ಜಿಪೂಜೆ ಆರಂಭಿಸಿದ್ದಾರೆ.

ಮುಂಗಾರು ಪೂರ್ವದಲ್ಲಿ ಸಾಮಾನ್ಯವಾಗಿ ಆಚರಿಸಲಾಗುವ ಈ ಸಂಪ್ರದಾಯದ ಮೂಲಕ ಉತ್ತಮ ಮಳೆಯಾಗಿ ಭೂಮಿ ತೇವಗೊಂಡು ಬಿತ್ತನೆ ಕಾರ್ಯ ಯಶಸ್ವಿಯಾಗಲಿ, ಬೆಳೆ ಸಮೃದ್ಧಿಯಾಗಿ ರೈತರ ಮನೆಗಳಲ್ಲಿ ಧಾನ್ಯ ತುಂಬಲಿ ಎಂದು ಪ್ರಾರ್ಥಿಸಲಾಗುತ್ತದೆ. ಮಳೆ ಹಾಗೂ ಕೃಷಿ ಅವಿನಾಭಾವ ಸಂಬಂಧ ಹೊಂದಿರುವ ಹಿನ್ನೆಲೆಯಲ್ಲಿ ಗುರ್ಜಿಪೂಜೆಯನ್ನು ಪ್ರಕೃತಿ ಆರಾಧನೆಯ ರೂಪದಲ್ಲಿಯೂ ಕಾಣಲಾಗುತ್ತದೆ.

ಈ ಬಾರಿ ನಿರೀಕ್ಷಿತ ಪ್ರಮಾಣದಲ್ಲಿ ಮಳೆಯಾಗದ ಪರಿಣಾಮ ಬಿತ್ತನೆ ಮಾಡಿದ ಕೆಲವೆಡೆ ಬೆಳೆಗಳು ಒಣಗಿದ್ದು, ರೈತರು ಆರ್ಥಿಕ ಸಂಕಷ್ಟಕ್ಕೆ ಸಿಲುಕಿದ್ದಾರೆ. ಜಾನುವಾರುಗಳಿಗೆ ನೀರು ಹಾಗೂ ಮೇವಿನ ಕೊರತೆಯ ಆತಂಕವೂ ಎದುರಾಗಿದೆ.

ಈ ಹಿನ್ನೆಲೆಯಲ್ಲಿ ಹಿಂಗಾರು ಹಂಗಿನಲ್ಲಾದರೂ ಉತ್ತಮ ಮಳೆಯಾಗಿ ಒಣಗಿದ ಭೂಮಿಗೆ ಜೀವ ದೊರೆಯಲಿ, ಹೊಲಗಳು ಹಸಿರಾಗಲಿ, ಕೆರೆ-ಕಟ್ಟೆಗಳು ತುಂಬಲಿ, ಜಾನುವಾರುಗಳಿಗೆ ನೀರು-ಮೇವು ದೊರೆಯಲಿ ಹಾಗೂ ರೈತರ ಸಂಕಷ್ಟ ದೂರವಾಗಲಿ ಎಂದು ಮಹಿಳೆಯರು ಗುರ್ಜಿಪೂಜೆ ಮೂಲಕ ಪ್ರಾರ್ಥಿಸಿದರು.

ಸಿದ್ದಮ್ಮ ಗಡೇದ, ಲಕ್ಷ್ಮವ್ವ ದಾನಿ, ನೀಲವ್ವ ಗೊರವರ, ನೀಲಮ್ಮ ಸಾಲಾವಳಿಮಠ, ಮಾಲಾ ರಡ್ಡೇರ, ರೇಣುವ್ವ ಬೂದಿಹಾಳ, ರೇಣುಕಾ ದಾನಿ ಹಾಗೂ ಶಿವಕ್ಕ ಸಾಲಾವಳಿಮಠ ಸೇರಿದಂತೆ ರೈತ ಮಹಿಳೆಯರು ಪಾಲ್ಗೊಂಡಿದ್ದರು.

# ನಡೆ-ನುಡಿಗಳು ಸಮತೋಲನದಲ್ಲಿದ್ದರೆ ಸಮಸ್ಯೆಗಳು ದೂರ



**ವಿಜಯಸಾಕ್ಷಿ ಸುದ್ದಿ, ಗದಗ**

ವ್ಯಕ್ತಿ, ಸಮಾಜ ಹಾಗೂ ಸರ್ಕಾರ ನುಡಿದಂತೆ ನಡೆದುಕೊಂಡಾಗ ಸಮಸ್ಯೆ ಮತ್ತು ಸಂಘರ್ಷಗಳು ದೂರವಾಗುತ್ತವೆ ಎಂದು ಶಿರಹಟ್ಟಿ ಸರ್ಕಾರಿ ಮಹಿಳಾ ಪ್ರಥಮ ದರ್ಜೆ ಕಾಲೇಜಿನ ಪ್ರೊ. ಸಿದ್ಧಲಿಂಗೇಶ ಸಜ್ಜನಶೆಟ್ಟರ ಹೇಳಿದರು.

ನಗರದಲ್ಲಿ ಎಸ್.ವಾಯ್.ಬಿ.ಎಂ.ಎಸ್. ಯೋಗಪಾಠಶಾಲೆ, ಡಾ. ತೋಂಟದ ಸಿದ್ಧಲಿಂಗ ಮಹಾಸ್ವಾಮಿಗಳ ವಚನಪಾಠಶಾಲೆ ಹಾಗೂ ಅಕ್ಕಮಹಾದೇವಿ ಯೋಗ ವಿಜ್ಞಾನ ಕೇಂದ್ರದ ಸಹಯೋಗದಲ್ಲಿ ನಡೆದ ಸಾಪ್ತಾಹಿಕ ವಚನ ಶ್ರಾವಣ-2026ರ ಮಂಗಲೋತ್ಸವದಲ್ಲಿ ಅವರು ಮಾತನಾಡಿದರು.

ಬಸವಣ್ಣನವರ 'ನುಡಿದಂತೆ ನಡೆವೆ' ವಚನದ ಅರ್ಥ ವಿವರಿಸಿದ ಅವರು, ಮಾತು ಮತ್ತು ಕೃತಿಗಳಲ್ಲಿ ಹೊಂದಾಣಿಕೆ ಇದ್ದಾಗ ಆತ್ಮವಿಶ್ವಾಸ, ಶುದ್ಧ ಚಾರಿತ್ರ್ಯ ಹಾಗೂ ನೆಮ್ಮದಿಯ ಬದುಕು ಸಾಧ್ಯವಾಗುತ್ತದೆ ಎಂದರು.

ನಿವೃತ್ತ ಶಿಕ್ಷಕ ಜಿ.ಪಿ. ಕಟ್ಟಿಮನಿ ಮಾತನಾಡಿ, ವಚನಗಳು ಜ್ಞಾನಾಮೃತದ ಕಲಶಗಳಾಗಿದ್ದು, ಅವುಗಳ ತತ್ವಗಳನ್ನು ನಿತ್ಯ ಜೀವನದಲ್ಲಿ ಅಳವಡಿಸಿಕೊಳ್ಳಬೇಕು ಎಂದರು.

ಅಧ್ಯಕ್ಷತೆ ವಹಿಸಿದ್ದ ನಿವೃತ್ತ ಮುಖ್ಯೋಪಾಧ್ಯಾಯ ಶಿವನಗೌಡ ಗೌಡರ ಮಾತನಾಡಿ, ಶಿವಶರಣರ ವಚನಗಳನ್ನು ಅರಿತು ಆಚರಿಸಿದರೆ ಜೀವನ ಪಾವನವಾಗುತ್ತದೆ. 'ಇವ ನಮ್ಮವ' ಎಂಬ ಭಾವನೆ ಬೆಳೆದಾಗ ಸುಂದರ ಸಮಾಜ ನಿರ್ಮಾಣವಾಗುತ್ತದೆ ಎಂದರು.

ಕಾರ್ಯಕ್ರಮದಲ್ಲಿ ವಚನ ಸಂಗೀತ, ವಚನ ನೃತ್ಯ ಹಾಗೂ ಸನ್ಮಾನ ಕಾರ್ಯಕ್ರಮಗಳು ನಡೆದವು. ಶಾಂತಾ ಮುಂದಿನಮನಿ, ಕೆ.ಎಸ್. ಪಲ್ಲೇದ ಸೇರಿದಂತೆ ಹಲವರು ಉಪಸ್ಥಿತರಿದ್ದರು. ಸುನಂದಾ ಜ್ಯಾನೋಪಂತರ ಸ್ವಾಗತಿಸಿದರು. ಬಸವರಾಜ ತೋಟಿಗೇರ ನಿರೂಪಿಸಿದರು.


ಕರ್ನಾಟಕ ಸರಕಾರ

**ಪುರಸಭೆ ಕಾರ್ಯಾಲಯ ಮುಂಡರಗಿ 582118**

ದೂರವಾಣಿ: 08371-262232 ಫ್ಯಾಕ್ಸ್ ನಂ: 08371-262638

Email ID: ka.mundargi.tmc@gmail.com

Website: www.mundargitown.gov.in

ಸಂಖ್ಯೆ: ಪುಸಮುಂ/ಕಾಮಗಾರಿ/2026-27 ದಿನಾಂಕ: 08-09-2026

**ಇ-ಟೆಂಡರ್ ಪ್ರಕಟಣೆ**

ಕರ್ನಾಟಕ ಪಾರದರ್ಶಕ ಅಧಿನಿಯಮ 1999 & 2000 ಕೆ.ಪಿ.ಪಿ. ಪೋರ್ಟಲ್‌ದಲ್ಲಿ ಸನ್ 2026-27 ನೇ ಸಾಲಿನ ಪುರಸಭೆ ಹಣಕಾಸು, ಅನುದಾನದಲ್ಲಿ ಈ ಕೆಳಗೆ ನಮೂದಿಸಿದ ಕಾಮಗಾರಿಗಳ ನಿರ್ವಹಣೆಗಾಗಿ ಕೆ.ಡಬ್ಲ್ಯೂ-2 ದಸ್ತಾವೇಜನಲ್ಲಿ ಕೆ.ಪಿ.ಪಿ. ಪೋರ್ಟಲ್‌ನಲ್ಲಿ ನೊಂದಾಯಿಸಲ್ಪಟ್ಟ ಮತ್ತು ಲೋಕೋಪಯೋಗಿ ಇಲಾಖೆಯಲ್ಲಿ ನೊಂದಾಯಿತ ಅರ್ಹ ಗುತ್ತಿಗೆದಾರರಿಂದ ಟೆಂಡರ್‌ನ್ನು ಆಹ್ವಾನಿಸಲಾಗಿದೆ. ಇಂಡೆಂಟ್ ನಂ. DMA/2026-27/OW/WORK_INDENT61796 DMA/2026-27/OW/WORK_INDENT61893, DMA/2026-27/OW/WORK_INDENT61893, ನೇದ್ದರ ಟೆಂಡರ ಮೊತ್ತ-17.5ಲಕ್ಷಗಳಿಗೆ http://kppp.karnataka.gv.in ರಲ್ಲಿ ಸಂಪರ್ಕಿಸಿ ಟೆಂಡರ್ ಸಲ್ಲಿಸಬಹುದಾಗಿದೆ. ಸಂಪರ್ಕಿಸುವುದು. ಹಾಗೂ ಟೆಂಡರ್ ಮಂಜೂರು ವ ನಾಮಂಜೂರ ಮಾಡುವ ಅಧಿಕಾರವನ್ನು ಪುರಸಭೆಯು ಕಾಯ್ದಿರಿಸಿಕೊಂಡಿದೆ. ಈ ಟೆಂಡರ್‌ಗಳಿಗೆ ಸಂಬಂಧಿಸಿದ ಯಾವುದೇ ತಿದ್ದುಪಡಿಗಳನ್ನು ಇಪ್ರೊಕ್ಯೂರಮೆಂಟ ಪೋರ್ಟಲ್‌ನಲ್ಲಿ ಮಾತ್ರ ಪ್ರಕಟಣೆ ಮಾಡಲಾಗುವುದು ಯಾವುದೇ ಪೇಪರ್ ಪ್ರಕಟಣೆ ಹೊರಡಿಸಲಾಗುವುದಿಲ್ಲ.

DMA/2026-27/OW/WORK_INDENT61796 5.00 lakh
DMA/2026-27/OW/WORK_INDENT61893 10.00 lakh
DMA/2026-27/OW/WORK_INDENT62197 2.50 lakh

| | | |
|---|---|---|
| 1 | ಇ-ಪ್ರೋಕ್ಯೂರಮೆಂಟ್ ಪದ್ಧತಿಯಲ್ಲಿ ಟೆಂಡರ್ ಸಲ್ಲಿಸುವ ಕೊನೆಯ ದಿನಾಂಕ: | 17/09/2026 ಸಾಯಂಕಾಲ 4.30 ರವರೆಗೆ |
| 2 | ಟೆಂಡರ್ ತೆರೆಯುವ ದಿನಾಂಕ: | 18/09/2026 ಸಾಯಂಕಾಲ 4.30 ರವರೆಗೆ |

ಸಹಿ/- ಮುಖ್ಯಾಧಿಕಾರಿ ಪುರಸಭೆ, ಮುಂಡರಗಿ

ವಾ.ಸಾ.ಸಂ.ಇ/ಗದಗ/242/ ದೇಶಪಾಂಡೆಪಬ್ಲಿಸಿಟಿ/2026-27

ಸಹಿ/- ಆಡಳಿತಾಧಿಕಾರಿಗಳು ಪುರಸಭೆ, ಮುಂಡರಗಿ


## ಅವಹೇಳನಕಾರಿ ಹೇಳಿಕೆ ಖಂಡಿಸಿ ಪ್ರತಿಭಟನೆ । ಪೌರಕಾರ್ಮಿಕರ ಅವಮಾನಕ್ಕೂ ಆಕ್ರೋಶ

# ಅಂಬೇಡ್ಕರ್-ಬುದ್ಧ-ಬಸವಣ್ಣ ಅವಹೇಳನ ಖಂಡಿಸಿ ಪ್ರತಿಭಟನೆ



**ವಿಜಯಸಾಕ್ಷಿ ಸುದ್ದಿ, ಗದಗ**

ಸಂವಿಧಾನ ಶಿಲ್ಪಿ ಡಾ. ಬಿ.ಆರ್. ಅಂಬೇಡ್ಕರ್, ಬುದ್ಧ ಹಾಗೂ ಬಸವಣ್ಣನವರ ಕುರಿತು ಸಾಮಾಜಿಕ ಜಾಲತಾಣದಲ್ಲಿ ಅವಹೇಳನಕಾರಿಯಾಗಿ ಮಾತನಾಡಿರುವ ಆರೋಪದ ಹಿನ್ನೆಲೆಯಲ್ಲಿ ವೇದಮೂರ್ತಿ ಎಂಬುವರನ್ನು ರಾಜ್ಯದಿಂದ ಗಡಿಪಾರು ಮಾಡಬೇಕು ಎಂದು ಆಗ್ರಹಿಸಿ ಸ್ಲಂ ಜನಾಂದೋಲನ ಕರ್ನಾಟಕ ಹಾಗೂ ಗದಗ ಜಿಲ್ಲಾ ಸ್ಲಂ ಸಮಿತಿ ಪದಾಧಿಕಾರಿಗಳು ಜಿಲ್ಲಾಧಿಕಾರಿ ಕಚೇರಿ ಎದುರು ಪ್ರತಿಭಟನೆ ನಡೆಸಿ, ಮುಖ್ಯಮಂತ್ರಿಗಳಿಗೆ ಮನವಿ ಸಲ್ಲಿಸಿದರು.

ಮಂಡ್ಯ ಜಿಲ್ಲೆಯ ಕೆ.ಆರ್. ಪೇಟೆ ತಾಲೂಕಿನ ದೊಡ್ಡಯಾಚೆನಹಳ್ಳಿಯ ವೇದಮೂರ್ತಿ ಅವರು ಅಂಬೇಡ್ಕರ್, ಬುದ್ಧ ಹಾಗೂ ಬಸವಣ್ಣನವರ ಕುರಿತು ಅವಹೇಳನಕಾರಿ ಹೇಳಿಕೆ ನೀಡಿದ್ದಾರೆ ಎಂದು ಪ್ರತಿಭಟನಾಕಾರರು ಆರೋಪಿಸಿದರು. ಮೀಸಲಾತಿ ಸೇರಿದಂತೆ ಸಂವಿಧಾನಾತ್ಮಕ ವಿಚಾರಗಳ ಬಗ್ಗೆಯೂ ಆಕ್ಷೇಪಾರ್ಹ ಹೇಳಿಕೆ ನೀಡಿರುವುದು ಸಾರ್ವಜನಿಕರ ಭಾವನೆಗಳಿಗೆ ಧಕ್ಕೆ ಉಂಟುಮಾಡುವುದಲ್ಲದೆ, ಸಾಮಾಜಿಕ ಸೌಹಾರ್ದತೆಗೆ ಧಕ್ಕೆ ತರುವ ಸಾಧ್ಯತೆಯಿದೆ. ಹೀಗಾಗಿ ಅವರ ವಿರುದ್ಧ ಕಠಿಣ ಕಾನೂನು ಕ್ರಮ ಜರುಗಿಸಬೇಕು ಎಂದು ಒತ್ತಾಯಿಸಿದರು.

ಬೆಂಗಳೂರು ನಗರಾಭಿವೃದ್ಧಿ ಸಚಿವ ಕೃಷ್ಣ ಬೈರೇಗೌಡ ಅವರನ್ನು ಪೌರಕಾರ್ಮಿಕರು ಭೇಟಿ ಮಾಡಿ, ಹಲವು ವರ್ಷಗಳಿಂದ ಗುತ್ತಿಗೆ ಆಧಾರದಲ್ಲಿ ಕೆಲಸ ಮಾಡುತ್ತಿರುವ ತಮ್ಮ ಸೇವೆಯನ್ನು ಕಾಯಂಗೊಳಿಸುವಂತೆ ಮನವಿ ಮಾಡಿದಾಗ ಸಚಿವರು ಅವಮಾನಿಸುವ ರೀತಿಯಲ್ಲಿ ಮಾತನಾಡಿದ್ದಾರೆ ಎಂದು ಆರೋಪಿಸಿ ಪ್ರತಿಭಟನಾಕಾರರು ಆಕ್ರೋಶ ವ್ಯಕ್ತಪಡಿಸಿದರು.


> ಅವಹೇಳನಕಾರಿ ಹೇಳಿಕೆ ನೀಡಿರುವ ವೇದಮೂರ್ತಿ ವಿರುದ್ಧ ಕಠಿಣ ಕ್ರಮ ಜರುಗಿಸಿ ರಾಜ್ಯದಿಂದ ಗಡಿಪಾರು ಮಾಡಬೇಕು. ಪೌರಕಾರ್ಮಿಕರನ್ನು ಅವಮಾನಿಸಿದ ಸಚಿವ ಕೃಷ್ಣ ಬೈರೇಗೌಡ ಅವರೂ ಕ್ಷಮೆ ಕೇಳಬೇಕು.
>
> - ಇಮ್ತಿಯಾಜ್ ಆರ್. ಮಾನ್ವಿ, ಸ್ಲಂ ಸಮಿತಿ ಅಧ್ಯಕ್ಷ.

ಬೆಲೆ ಏರಿಕೆಯ ಸಂದರ್ಭದಲ್ಲಿ ಕನಿಷ್ಠ ವೇತನದಲ್ಲಿ ಕುಟುಂಬ ನಿರ್ವಹಿಸುವುದು ಕಷ್ಟವಾಗಿದ್ದು, ಪೌರಕಾರ್ಮಿಕರ ಸಮಸ್ಯೆಗಳನ್ನು ಸರ್ಕಾರ ಗಂಭೀರವಾಗಿ ಪರಿಗಣಿಸಬೇಕು. ಸಚಿವರು ಬಹಿರಂಗವಾಗಿ ಕ್ಷಮೆ ಕೇಳಬೇಕು ಹಾಗೂ ಅವರ ವಿರುದ್ಧ ಕ್ರಮ ಜರುಗಿಸಿ ಸಚಿವ ಸ್ಥಾನದಿಂದ ಕೈಬಿಡಬೇಕು ಎಂದು ಮುಖ್ಯಮಂತ್ರಿಗಳಿಗೆ ಸಲ್ಲಿಸಿದ ಮನವಿಯಲ್ಲಿ ಆಗ್ರಹಿಸಿದರು.

ವಕೀಲ ಎಂ.ಬಿ. ನದಾಫ, ಪರವೀನಬಾನು ಹವಾಲ್ದಾರ, ಶರಣಪ್ಪ ಸೂಡಿ, ಇಬ್ರಾಹಿಂ ಮುಲ್ಲಾ, ಮೆಹಬೂಬಸಾಬ ಬಳ್ಳಾರಿ, ಪುಷ್ಪಾ ಬಿಜಾಪುರ, ಸಲೀಂ ಹರಿಹರ, ಖಾಜಾಸಾಬ ಇಸ್ಮಾಯಿಲನವರ, ಸಾಕ್ರುಬಾಯಿ ಗೋಸಾವಿ, ಮಕ್ತುಮಸಾಬ ಮುಲ್ಲಾನವರ, ಅಪ್ರೋಜಾ ಗುಳಗುಂದಿ, ಗೌಸಸಾಬ ಅಕ್ಕಿ, ರವಿ ಗೋಸಾವಿ, ಮಾಲಾ ಗೋಸಾವಿ ಸೇರಿದಂತೆ ವಿವಿಧ ಸ್ಲಂ ಪ್ರದೇಶಗಳ ನೂರಾರು ಜನರು ಪ್ರತಿಭಟನೆಯಲ್ಲಿ ಭಾಗವಹಿಸಿದ್ದರು.

## ಯುದ್ಧದ ಭೀಕರತೆ, ಶಾಂತಿಯ ಮಹತ್ವ ಸಾರುವ ಕುವೆಂಪು ಕೃತಿ: ಭೀಮೇಶ

# ಜಾಗತಿಕ ಸಂಘರ್ಷಗಳಿಗೆ ಕನ್ನಡಿ ಹಿಡಿದ 'ಸ್ಮಶಾನ ಕುರುಕ್ಷೇತ್ರ'



**ವಿಜಯಸಾಕ್ಷಿ ಸುದ್ದಿ, ಹುಲಕೋಟಿ**

ಯುದ್ಧಗಳು ಮಾನವ ಇತಿಹಾಸದಲ್ಲಿ ಎಂದಿಗೂ ಸುಖಾಂತ್ಯ ತಂದಿಲ್ಲ. ರಣಭೂಮಿಯಲ್ಲಿ ಅಂತಿಮವಾಗಿ ಉಳಿಯುವುದು ಹೆಣಗಳ ರಾಶಿ ಮತ್ತು ಸ್ಮಶಾನದ ಮೌನ ಮಾತ್ರ. ರಾಷ್ಟ್ರಕವಿ ಕುವೆಂಪು ಅವರ 'ಸ್ಮಶಾನ ಕುರುಕ್ಷೇತ್ರ' ನಾಟಕವು ಯುದ್ಧದ ಭೀಕರತೆ, ವಿನಾಶ ಹಾಗೂ ಶಾಂತಿಯ ಮಹತ್ವವನ್ನು ಸಾರುವ ಸಾರ್ವಕಾಲಿಕ ಕೃತಿಯಾಗಿದೆ ಎಂದು ಕನ್ನಡ ಪ್ರಾಧ್ಯಾಪಕ ಭೀಮೇಶ ಹೇಳಿದರು.

ಹುಲಕೋಟಿಯ ಶ್ರೀ ಕೆ.ಎಚ್. ಪಾಟೀಲ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನ ಕನ್ನಡ ವಿಭಾಗವು ಐಕ್ಯೂಎಸಿ ಅಡಿಯಲ್ಲಿ ಆಯೋಜಿಸಿದ್ದ 'ಸ್ಮಶಾನ ಕುರುಕ್ಷೇತ್ರ' ನಾಟಕ ವೀಕ್ಷಣೆ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು. ಪಠ್ಯದ ಜತೆಗೆ ರಂಗರೂಪದ ನಾಟಕ ವೀಕ್ಷಿಸುವುದರಿಂದ ವಿದ್ಯಾರ್ಥಿಗಳಿಗೆ ಸಾಹಿತ್ಯದ ಆಳವಾದ ಗ್ರಹಿಕೆ ಹಾಗೂ ಮಾನವೀಯ ಮೌಲ್ಯಗಳ ಅರಿವು ಮೂಡುತ್ತದೆ ಎಂದರು.

ಕನ್ನಡ ವಿಭಾಗದ ಮುಖ್ಯಸ್ಥ ರಮೇಶ ಹುಲಕುಂದ ಮಾತನಾಡಿ, ನಾಟಕದ ದೃಶ್ಯಾವಳಿ, ಸಂಭಾಷಣೆ ಹಾಗೂ ಪಾತ್ರಗಳ ಭಾವನಾತ್ಮಕ ಅಭಿವ್ಯಕ್ತಿಗಳನ್ನು ನೇರವಾಗಿ ವೀಕ್ಷಿಸುವುದರಿಂದ ರಂಗಭೂಮಿ ಮತ್ತು ಕನ್ನಡ ಸಾಹಿತ್ಯದ ಬಗ್ಗೆ ವಿದ್ಯಾರ್ಥಿಗಳಲ್ಲಿ ಆಸಕ್ತಿ ಹೆಚ್ಚುತ್ತದೆ ಎಂದರು.

> ಯುದ್ಧದ ಭೀಕರತೆ ಮತ್ತು ವಿನಾಶವನ್ನು ಮನದಟ್ಟಾಗಿಸುವ 'ಸ್ಮಶಾನ ಕುರುಕ್ಷೇತ್ರ' ಶಾಂತಿಯ ಅಗತ್ಯತೆಯನ್ನು ಸಾರುವ ಸಾರ್ವಕಾಲಿಕ ಕೃತಿಯಾಗಿದೆ.
>
> - ಪ್ರಾಧ್ಯಾಪಕ ಭೀಮೇಶ

ಅರ್ಥಶಾಸ್ತ್ರ ವಿಭಾಗದ ಮುಖ್ಯಸ್ಥ ಮಹಾಂತೇಶ, ವಾಣಿಜ್ಯಶಾಸ್ತ್ರ ವಿಭಾಗದ ಪ್ರಾಧ್ಯಾಪಕ ಡಾ. ಶ್ರೀಶವಿಠ್ಠಲ ಅವರು ನಾಟಕದ ಮೂಲಕ ಯುದ್ಧದ ವ್ಯರ್ಥತೆ, ಜಾಗತಿಕ ಶಾಂತಿ ಹಾಗೂ ಕುವೆಂಪು ಅವರ ಧರ್ಮ, ಕರ್ಮ, ಹಿಂಸೆ-ಅಹಿಂಸೆಯ ಕುರಿತಾದ ದಾರ್ಶನಿಕ ನೋಟವನ್ನು ಅರಿಯಬಹುದು ಎಂದರು.

ಅಧ್ಯಕ್ಷತೆ ವಹಿಸಿದ್ದ ಪ್ರಾಂಶುಪಾಲ ಡಾ. ಅಪ್ಪಣ್ಣ ಹಂಜೆ ಮಾತನಾಡಿ, ವಿದ್ಯಾರ್ಥಿಗಳು ಪುಸ್ತಕದ ಓದಿಗೆ ಸೀಮಿತವಾಗದೆ ನಾಟಕಗಳ ಮೂಲಕ ಸಾಹಿತ್ಯದ ದೃಶ್ಯಾನುಭವ ಪಡೆದು ಸಾಹಿತ್ಯಾಸಕ್ತಿ ಬೆಳೆಸಿಕೊಳ್ಳಬೇಕು ಎಂದರು.

ರಾಜ್ಯಶಾಸ್ತ್ರ ವಿಭಾಗದ ಮುಖ್ಯಸ್ಥ ಹುಸೇನ್‌ಭಾಷಾ ಸ್ವಾಗತಿಸಿದರು. ದರ್ಶನ ಹಂದ್ರಾಳ ನಿರೂಪಿಸಿದರು. ರೇಖಾ ಶಿರಹಟ್ಟಿ ವಂದಿಸಿದರು. ವಿವಿಧ ವಿಭಾಗಗಳ ಬೋಧಕರು ಹಾಗೂ ವಿದ್ಯಾರ್ಥಿಗಳು ನಾಟಕವನ್ನು ಆಸಕ್ತಿಯಿಂದ ವೀಕ್ಷಿಸಿದರು.

## ತಂತ್ರಜ್ಞಾನ ಶಿಕ್ಷಕರಿಗೆ ಪೂರಕವೇ ಹೊರತು ಪರ್ಯಾಯವಲ್ಲ

# ರಾಷ್ಟ್ರ ನಿರ್ಮಾಣದಲ್ಲಿ ಶಿಕ್ಷಕರ ಪಾತ್ರ ಮಹತ್ವದ್ದು



**ವಿಜಯಸಾಕ್ಷಿ ಸುದ್ದಿ, ಗದಗ**

ಶಿಕ್ಷಕರು ರಾಷ್ಟ್ರ ನಿರ್ಮಾತೃಗಳಾಗಿದ್ದು, ಸಮರ್ಥ ಮಾನವ ಸಂಪನ್ಮೂಲ ಅಭಿವೃದ್ಧಿಯಲ್ಲಿ ಅವರ ಪಾತ್ರ ಮಹತ್ವದ್ದಾಗಿದೆ ಎಂದು ಉಪನ್ಯಾಸಕಿ ಪ್ರಿಯಾಂಕಾ ನಡುವಿನಮನಿ ಹೇಳಿದರು.

ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ ವತಿಯಿಂದ ತೋಂಟದ ಸಿದ್ಧಲಿಂಗಶ್ರೀಗಳ ಕನ್ನಡ ಭವನದಲ್ಲಿ ಆಯೋಜಿಸಿದ್ದ ಶಿಕ್ಷಕರ ದಿನಾಚರಣೆ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

ವಿದ್ಯಾರ್ಥಿಗಳಲ್ಲಿರುವ ಪ್ರತಿಭೆ ಗುರುತಿಸಿ, ಅವರಿಗೆ ಸೂಕ್ತ ಅವಕಾಶ ಕಲ್ಪಿಸಿ ಉತ್ತಮ ನಾಗರಿಕರನ್ನಾಗಿ ರೂಪಿಸುವ ಹೊಣೆ ಶಿಕ್ಷಕರ ಮೇಲಿದೆ. ಗುರುಕುಲ ಪದ್ಧತಿಯಿಂದ ಎಐ ಶಿಕ್ಷಣದವರೆಗೆ ವ್ಯವಸ್ಥೆ ಬದಲಾಗಿದ್ದರೂ ಶಿಕ್ಷಕರ ಮಹತ್ವ ಕಡಿಮೆಯಾಗಿಲ್ಲ. ಯಾವುದೇ ತಂತ್ರಜ್ಞಾನ ಶಿಕ್ಷಕರಿಗೆ ಪರ್ಯಾಯವಾಗಲಾರದು, ಅವು ಪೂರಕವಾಗಿ ಕಾರ್ಯನಿರ್ವಹಿಸಬಹುದೇ ಹೊರತು ವಿದ್ಯಾರ್ಥಿಗಳಲ್ಲಿ ಭಾವನೆಗಳನ್ನು ತುಂಬಲು ಸಾಧ್ಯವಿಲ್ಲ ಎಂದರು.

ಆರ್‌ಡಿಪಿಆರ್ ವಿಶ್ವವಿದ್ಯಾಲಯದ ಕುಲಸಚಿವ ಡಾ. ಅಮರೇಶ ಯತಗಲ್ ಮಾತನಾಡಿ, ವಿದ್ಯಾರ್ಥಿಗಳ ಸರ್ವತೋಮುಖ ವಿಕಾಸಕ್ಕೆ ಶಿಕ್ಷಕರ ಸೇವೆ ಸ್ಮರಣೀಯವಾಗಿದೆ ಎಂದರು.

ಉಪನ್ಯಾಸಕರ ಸಂಘದ ಅಧ್ಯಕ್ಷ ಎಸ್.ಎಸ್. ಸೋಮಣ್ಣವರ ಮಾತನಾಡಿ, ಶಿಕ್ಷಕರಿಗೆ ಬೋಧನೆಯೇತರ ಕೆಲಸಗಳ ಹೊರೆ ಹೆಚ್ಚಿದ್ದು, ಇದು ಗುಣಮಟ್ಟದ ಶಿಕ್ಷಣಕ್ಕೆ ಅಡಚಣೆಯಾಗಿದೆ. ಕೆಳಹಂತದಿಂದಲೇ ವಿದ್ಯಾರ್ಥಿಗಳ ಸಾಮರ್ಥ್ಯ ಬೆಳೆಸುವ ಯೋಜನೆ ರೂಪಿಸಬೇಕು ಎಂದರು.

ಅಧ್ಯಕ್ಷತೆ ವಹಿಸಿದ್ದ ಕಸಾಪ ಜಿಲ್ಲಾಧ್ಯಕ್ಷ ವಿವೇಕಾನಂದಗೌಡ ಪಾಟೀಲ ಮಾತನಾಡಿ, ಶಾಲೆಗಳು ಸಂವಿಧಾನದ ಆಶಯಗಳನ್ನು ಈಡೇರಿಸುವ ಪವಿತ್ರ ತಾಣಗಳಾಗಿವೆ. ವ್ಯಕ್ತಿ ಮತ್ತು ಸಮಾಜದ ಉನ್ನತಿಗೆ ಶಿಕ್ಷಕರ ಸೇವೆ ಮಹತ್ವದ್ದಾಗಿದೆ ಎಂದರು.

ಈ ಸಂದರ್ಭದಲ್ಲಿ ಡಾ. ಅಮರೇಶ ಯತಗಲ್ ಹಾಗೂ ಎಸ್.ಎಸ್. ಸೋಮಣ್ಣವರ ಅವರನ್ನು ಸನ್ಮಾನಿಸಲಾಯಿತು. ರಾಹುಲ ಗಿಡ್ನಂದಿ ನಿರೂಪಿಸಿದರು. ಕಿಶೋರಬಾಬು ನಾಗರಕಟ್ಟಿ ಸ್ವಾಗತಿಸಿದರು. ಸತೀಶ ಚನ್ನಪ್ಪಗೌಡರ ವಂದಿಸಿದರು. ಹಲವು ಗಣ್ಯರು ಹಾಗೂ ಶಿಕ್ಷಕರು ಪಾಲ್ಗೊಂಡಿದ್ದರು.

# ಕಾಮಗಾರಿಗಳು ಗುಣಮಟ್ಟದ್ದಾಗಿರಲಿ: ಮಿಥುನ ಪಾಟೀಲ



**ವಿಜಯಸಾಕ್ಷಿ ಸುದ್ದಿ, ನರೇಗಲ್ಲ**

ಪಟ್ಟಣದಲ್ಲಿ ಕೈಗೊಳ್ಳುವ ಎಲ್ಲ ಅಭಿವೃದ್ಧಿ ಕಾಮಗಾರಿಗಳು ಗುಣಮಟ್ಟದಿಂದ ಕೂಡಿರಬೇಕು. ಗುತ್ತಿಗೆದಾರರು ನಿಗದಿತ ಅನುದಾನಕ್ಕೆ ಅನುಗುಣವಾಗಿ ಕಾಮಗಾರಿ ನಿರ್ವಹಿಸಿ ಸಾರ್ವಜನಿಕರಿಂದ ಉತ್ತಮ ಪ್ರತಿಕ್ರಿಯೆ ಪಡೆಯಬೇಕು ಎಂದು ರೋಣ ತಾಲೂಕು ಗ್ಯಾರಂಟಿ ಅನುಷ್ಠಾನ ಸಮಿತಿ ಅಧ್ಯಕ್ಷ ಮಿಥುನ ಪಾಟೀಲ ಹೇಳಿದರು.

ಪಟ್ಟಣದಲ್ಲಿ ಎರಡು ಅಭಿವೃದ್ಧಿ ಕಾಮಗಾರಿಗಳಿಗೆ ಭೂಮಿಪೂಜೆ ನೆರವೇರಿಸಿ, ನೂತನ ಅಂಗನವಾಡಿ ಕಟ್ಟಡ ಉದ್ಘಾಟಿಸಿ ಅವರು ಮಾತನಾಡಿದರು.

ವಿಧಾನಸಭೆ ಅಧ್ಯಕ್ಷ ಹಾಗೂ ತಮ್ಮ ತಂದೆ ಜಿ.ಎಸ್. ಪಾಟೀಲರು ಕ್ಷೇತ್ರದ ಅಭಿವೃದ್ಧಿಗೆ ಕಂಕಣಬದ್ಧರಾಗಿದ್ದು, ಅಗತ್ಯ ಅನುದಾನ ತರುವಲ್ಲಿ ಹಿಂದೆ ಬಿದ್ದಿಲ್ಲ. ಬಂದ ಅನುದಾನವನ್ನು ಸಮರ್ಪಕವಾಗಿ ಬಳಕೆ ಮಾಡುವುದು ಎಲ್ಲರ ಜವಾಬ್ದಾರಿ ಎಂದರು.

ರೋಣ-ಜಕ್ಕಲಿ-ನರೇಗಲ್ಲ-ಅಬ್ಬಿಗೇರಿ ರಸ್ತೆ ಸುಧಾರಣೆಗೆ 150 ಲಕ್ಷ ಹಾಗೂ ಗಾಂಧಿ ಭವನ ನವೀಕರಣಕ್ಕೆ 35 ಲಕ್ಷ ವೆಚ್ಚದ ಕಾಮಗಾರಿಗಳಿಗೆ ಚಾಲನೆ ನೀಡಲಾಗಿದೆ. ಕಾಮಗಾರಿಗಳು ಶೀಘ್ರ ಪೂರ್ಣಗೊಂಡು ಸಾರ್ವಜನಿಕರಿಗೆ ಅನುಕೂಲವಾಗಬೇಕು. ಗಾಂಧಿ ಭವನದಲ್ಲಿ ಹಿಂದಿನಂತೆ ಸಾಂಸ್ಕೃತಿಕ ಚಟುವಟಿಕೆಗಳು ನಡೆಯಬೇಕು ಹಾಗೂ ಕಟ್ಟಡ ದುರುಪಯೋಗವಾಗದಂತೆ ನೋಡಿಕೊಳ್ಳುವುದು ಎಲ್ಲರ ಜವಾಬ್ದಾರಿ ಎಂದು ಹೇಳಿದರು.

ಈ ಸಂದರ್ಭದಲ್ಲಿ ನರೇಗಲ್ಲ ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಶರಣಪ್ಪ ಬೆಟಗೇರಿ, ಪಪಂ ಮಾಜಿ ಅಧ್ಯಕ್ಷ ಫಕೀರಪ್ಪ ಮಳ್ಳಿ, ಮಾಜಿ ಉಪಾಧ್ಯಕ್ಷ ಕುಮಾರಸ್ವಾಮಿ ಕೋರಧಾನ್ಯಮಠ ಸೇರಿದಂತೆ ಹಲವು ಮುಖಂಡರು ಉಪಸ್ಥಿತರಿದ್ದರು.

# ಕಾಯಕ ಮಹತ್ವ ಎತ್ತಿ ಹಿಡಿದ ನುಲಿಯ ಚಂದಯ್ಯನವರು




**ವಿಜಯಸಾಕ್ಷಿ ಸುದ್ದಿ, ಗದಗ**

ಕಾಯಕ, ದಾಸೋಹ ಹಾಗೂ ಶಿವಯೋಗದ ಮಹತ್ವವನ್ನು ಅರಿತು ಜೀವನದಲ್ಲಿ ಅಳವಡಿಸಿಕೊಂಡು ಶರಣ ಪರಂಪರೆಯಲ್ಲಿ ವಿಶಿಷ್ಟ ಸ್ಥಾನ ಪಡೆದವರು ನುಲಿಯ ಚಂದಯ್ಯನವರು ಎಂದು ಶರಣ ಎಸ್.ಎಂ. ಹಾದಿಮನಿ ಹೇಳಿದರು.

ನಗರದಲ್ಲಿ ಬಸವದಳದ 1714ನೇ ಶರಣ ಸಂಗಮದಲ್ಲಿ ನುಲಿಯ ಚಂದಯ್ಯನವರ ಕುರಿತು ಉಪನ್ಯಾಸ ನೀಡಿದ ಅವರು, ಮೇದೆ ಹುಲ್ಲು ಕೊಯ್ದು ತಂದು ಹಗ್ಗ ಹೊಸೆದು ಮಾರಾಟ ಮಾಡಿ ಬಂದ ಆದಾಯದಲ್ಲಿ ನಿತ್ಯ ದಾಸೋಹ ಮಾಡುತ್ತಿದ್ದ ಚಂದಯ್ಯನವರು ಕಾಯಕದ ಮಹತ್ವವನ್ನು ಎತ್ತಿಹಿಡಿದಿದ್ದರು ಎಂದರು.

ಕಲ್ಯಾಣಕ್ರಾಂತಿಯ ಬಳಿಕ ಅಕ್ಕನಾಗಮ್ಮ ಅವರೊಂದಿಗೆ ಲಿಂಗಾಯತ ಧರ್ಮ ಪ್ರಸಾರ ಹಾಗೂ ವಚನ ಸಾಹಿತ್ಯ ರಕ್ಷಣೆಯಲ್ಲಿ ತೊಡಗಿದ್ದ ಅವರು, ಅನುಭವ ಮಂಟಪದ ಸದಸ್ಯರಾಗಿದ್ದು 770 ಅಮರಗಣಂಗಳಲ್ಲಿ ಒಬ್ಬರಾಗಿದ್ದರು ಎಂದು ತಿಳಿಸಿದರು.

ಮುಖ್ಯ ಅತಿಥಿ ಶರಣ ಶಿವಾನಂದ ಎಫ್. ಭಜಂತ್ರಿ ಮಾತನಾಡಿ, ಚಂದಯ್ಯನವರ ಸಾವಿರಾರು ವಚನಗಳಲ್ಲಿ 48 ವಚನಗಳು ಮಾತ್ರ ಲಭ್ಯವಾಗಿದ್ದು, 'ಚಂದೇಶ್ವರಲಿಂಗ' ಅವರ ವಚನಾಂಕಿತವಾಗಿದೆ. ಅವರ ಕುರಿತು ಇನ್ನಷ್ಟು ಸಂಶೋಧನೆ ನಡೆಯಬೇಕು ಎಂದರು.

ಅಧ್ಯಕ್ಷತೆ ವಹಿಸಿದ್ದ ಶರಣ ವಿ.ಕೆ. ಕರೇಗೌಡ್ರ, ಚಂದಯ್ಯನವರ ಕಾಯಕನಿಷ್ಠೆ ಎಲ್ಲರಿಗೂ ಮಾದರಿ ಎಂದರು. ಶರಣ ಸಂಜಯ ದಳಬಂಜನ ಶಿಕ್ಷಕರ ದಿನಾಚರಣೆ ಕುರಿತು ಮಾತನಾಡಿದರು. ಇತ್ತೀಚೆಗೆ ಲಿಂಗೈಕ್ಯರಾದ ಶರಣ ವಿ.ಕೆ. ಹೂಗಾರ ಹಾಗೂ ಶರಣೆ ರತ್ನಕ್ಕ ಪಾಟೀಲ ಅವರಿಗೆ ಶ್ರದ್ಧಾಂಜಲಿ ಸಲ್ಲಿಸಲಾಯಿತು.

ಶರಣ ಶೇಖಣ್ಣ ಕಳಸಾಪೂರಶೆಟ್ರ ಸ್ವಾಗತಿಸಿದರು. ಶರಣ ಎಸ್.ಎಂ. ಕವಳಿಕಾಯಿ ಶರಣು ಸಮರ್ಪಿಸಿದರು. ಶರಣ ಎಂ.ಬಿ. ಲಿಂಗದಾಳ ನಿರೂಪಿಸಿದರು. ವಚನ ಮಂಗಲದೊಂದಿಗೆ ಕಾರ್ಯಕ್ರಮ ಸಂಪನ್ನಗೊಂಡಿತು.

# ಮಿಷನ್ ಶಕ್ತಿ ಯೋಜನೆಯಡಿ ಅರ್ಜಿ ಆಹ್ವಾನ

**ವಿಜಯಸಾಕ್ಷಿ ಸುದ್ದಿ, ಗದಗ**

ಮಿಷನ್ ಶಕ್ತಿ ಯೋಜನೆಯಡಿ ಜಿಲ್ಲೆಯ ಐದು ತಾಲ್ಲೂಕುಗಳಲ್ಲಿ ಖಾಲಿ ಇರುವ 33 ಅಂಗನವಾಡಿ ಕ್ರಷ್ ಕಾರ್ಯಕರ್ತೆ ಹಾಗೂ 33 ಸಹಾಯಕಿಯರ ಹುದ್ದೆಗಳಿಗೆ ಅರ್ಜಿ ಆಹ್ವಾನಿಸಲಾಗಿದೆ.

ಅರ್ಜಿ ಸಲ್ಲಿಸಲು ಅಕ್ಟೋಬರ್ 4 ಕೊನೆಯ ದಿನವಾಗಿದ್ದು, ಸಂಬಂಧಪಟ್ಟ ತಾಲ್ಲೂಕುಗಳ ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳ ಕಚೇರಿಯ ಅರ್ಜಿ ಪೆಟ್ಟಿಗೆಯಲ್ಲಿ ಅರ್ಜಿ ಸಲ್ಲಿಸಬಹುದು.

ಹೆಚ್ಚಿನ ಮಾಹಿತಿಗಾಗಿ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಕಚೇರಿಯನ್ನು ಸಂಪರ್ಕಿಸಬಹುದು ಎಂದು ಇಲಾಖೆಯ ಉಪನಿರ್ದೇಶಕಿ ರಾಧಾ ಮಣ್ಣೂರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಶಿಶಿಕ್ಷು ತರಬೇತಿಗಾಗಿ ಅರ್ಜಿ ಆಹ್ವಾನ

**ವಿಜಯಸಾಕ್ಷಿ ಸುದ್ದಿ, ಗದಗ**

ವಾಯವ್ಯ ಕರ್ನಾಟಕ ರಸ್ತೆ ಸಾರಿಗೆ ಸಂಸ್ಥೆಯ ಗದಗ ವಿಭಾಗೀಯ ಕಚೇರಿಯಲ್ಲಿ ಐಟಿಐ-ಕೋಪಾ (ಅಔಕಂ) ವೃತ್ತಿಯಲ್ಲಿ ಒಂದು ವರ್ಷದ ಶಿಶಿಕ್ಷು ತರಬೇತಿಗಾಗಿ ಅರ್ಹ ಅಭ್ಯರ್ಥಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ.

ಅಭ್ಯರ್ಥಿಗಳು "www.apprenticeshipindia.gov.in" (https://www.apprenticeshipindia.gov.in) ಮೂಲಕ ಆನ್‌ಲೈನ್‌ನಲ್ಲಿ ಅರ್ಜಿ ಸಲ್ಲಿಸಿ, ಸೆ. 17ರಂದು ಬೆಳಗ್ಗೆ 10.30ಕ್ಕೆ ನಗರದ ವಾ.ಕ.ರ.ಸಾ. ಸಂಸ್ಥೆಯ ವಿಭಾಗೀಯ ಕಚೇರಿಯಲ್ಲಿ ನಡೆಯುವ ನೇರ ಸಂದರ್ಶನಕ್ಕೆ ಹಾಜರಾಗಬೇಕು.

ಹೆಚ್ಚಿನ ಮಾಹಿತಿಗಾಗಿ ಸಂಸ್ಥೆಯ ಗದಗ ವಿಭಾಗೀಯ ಕಚೇರಿಯನ್ನು ಸಂಪರ್ಕಿಸಬಹುದು ಎಂದು ವಿಭಾಗೀಯ ನಿಯಂತ್ರಣಾಧಿಕಾರಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಸಂಕ್ಷಿಪ್ತ ಸುದ್ದಿಗಳು

# ನಂದಗೋಕುಲದಲ್ಲಿ ಸಂಭ್ರಮದ ಗೋಕುಲಾಷ್ಟಮಿ




**ವಿಜಯಸಾಕ್ಷಿ ಸುದ್ದಿ, ಗದಗ**

ರಾಷ್ಟ್ರೀಯ ಸೇವಿಕಾ ಸಮಿತಿ ಗದಗ ಶಹರ ಘಟಕದ ವತಿಯಿಂದ ಬೆಟಗೇರಿಯ ಸೇವಾ ಭಾರತಿ ಟ್ರಸ್ಟ್ (ರಿ.)ನ ಅಮೂಲ್ಯ ವಿಶೇಷ ದತ್ತು ಸ್ವೀಕಾರ ಸಂಸ್ಥೆಯ 'ನಂದಗೋಕುಲ'ದಲ್ಲಿ ಭಾನುವಾರ ಶ್ರೀಕೃಷ್ಣ ಜನ್ಮಾಷ್ಟಮಿ ಗೋಕುಲಾಷ್ಟಮಿಯನ್ನು ಸಂಭ್ರಮ ಹಾಗೂ ಭಕ್ತಿಭಾವದಿಂದ ಆಚರಿಸಲಾಯಿತು.

ವಿಶೇಷ ಆಚರಣೆಯಲ್ಲಿ ಕೇಂದ್ರದ ಪುಟಾಣಿಗಳೊಂದಿಗೆ ಸೇವಿಕಾ ಸಮಿತಿ ಸದಸ್ಯರ ಮಕ್ಕಳು ಕೃಷ್ಣ ರಾಧೆಯ ವೇಷದಲ್ಲಿ ಪಾಲ್ಗೊಂಡು ಸಂಭ್ರಮವನ್ನು ಇಮ್ಮಡಿಗೊಳಿಸಿದರು. ಮಕ್ಕಳ ಮೊಗದಲ್ಲಿ ಮೂಡಿದ ಕೃಷ್ಣನ ನಗು ಹಾಗೂ ಭಕ್ತಿಗೀತೆಗಳು ಕಾರ್ಯಕ್ರಮಕ್ಕೆ ವಿಶೇಷ ಮೆರಗು ನೀಡಿದವು.

ಈ ಸಂದರ್ಭದಲ್ಲಿ ಪುಷ್ಪಾ ಕಾಮಾರ್ತಿ, ಅನಸೂಯಾ ಶೀಲವಂತರ, ಅಶ್ವಿನಿ ಶಿಗ್ಗಾಂವಿ, ರಜನಿ ಪಂಥರ, ವೈಷ್ಣವಿ ರಬ್ಬನಗೌಡರ, ಲಲಿತಾ ಮೇರವಾಡೆ, ಅನುಪಮಾ ಹೊಸಮನಿ, ಮೇಘಾ ಕುಲಕರ್ಣಿ, ನಾಗವೇಣಿ ಕಟ್ಟಿಮನಿ, ಡಾ. ಪ್ರಕಾಶ ಹೊಸಮನಿ, ವಿದಾರ್ಥ ಹೊಸಮನಿ, ಸಿಂಚನಾ ಸಜ್ಜನರ, ಸಮೃದ್ಧಿ ಸಜ್ಜನರ ಸೇರಿದಂತೆ ಸಮಿತಿಯ ಪ್ರಮುಖರು ಹಾಗೂ ಕಾರ್ಯಕರ್ತರು ಉಪಸ್ಥಿತರಿದ್ದರು. ಇದೇ ಸಂದರ್ಭದಲ್ಲಿ ನಂದಗೋಕುಲ ಕೇಂದ್ರದ ಆಯಾಗಳಿಗೆ ರಕ್ಷಾಬಂಧನ ಕಾರ್ಯಕ್ರಮವನ್ನೂ ಆಯೋಜಿಸಲಾಗಿತ್ತು ಎಂದು ವಿಶೇಷ ದತ್ತು ಸ್ವೀಕಾರ ಕೇಂದ್ರದ ಗುರುಸಿದ್ಧಪ್ಪ ಕೊಣ್ಣೂರ ತಿಳಿಸಿದ್ದಾರೆ.

# ಹಂಚಿನಮನಿಗೆ ಜಿಲ್ಲಾ ಮಟ್ಟದ ಉತ್ತಮ ಶಿಕ್ಷಕ ಪ್ರಶಸ್ತಿ



**ವಿಜಯಸಾಕ್ಷಿ ಸುದ್ದಿ, ಹಾವೇರಿ**

ಮುಸ್ಲಿಂ ಎಂಪ್ಲಾಯಿಜ್ ವೆಲ್ಫೇರ್ ಅಸೋಸಿಯೇಶನ್ (ಮೇವಾ) ರಾಜ್ಯ ಉಪಾಧ್ಯಕ್ಷರೂ, ಹಾವೇರಿ ಜಿಲ್ಲೆಯ ತಡಸದಲ್ಲಿ ಶಿಕ್ಷಕರಾಗಿ ಸೇವೆ ಸಲ್ಲಿಸುತ್ತಿರುವ ಗದಗದ ನಿಯಾಜ್‌ಅಹ್ಮದ್ ಹಂಚಿನಮನಿ ಅವರ ಅತ್ಯುತ್ತಮ ಸೇವೆಯನ್ನು ಗುರುತಿಸಿ, ಹಾವೇರಿ ಜಿಲ್ಲಾ ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ ಜಿಲ್ಲಾ ಮಟ್ಟದ ಉತ್ತಮ ಶಿಕ್ಷಕ ಪ್ರಶಸ್ತಿ ನೀಡಿ ಗೌರವಿಸಿದೆ.

ಹಾವೇರಿ ಜಿಲ್ಲಾ ಉಸ್ತುವಾರಿ ಸಚಿವ ಹಾಗೂ ಸಕ್ಕರೆ ಮತ್ತು ಜವಳಿ ಸಚಿವ ರುದ್ರಪ್ಪ ಲಮಾಣಿ ಅವರು ಪ್ರಶಸ್ತಿ ಪ್ರದಾನ ಮಾಡಿ ನಿಯಾಜ್‌ಅಹ್ಮದ್ ಹಂಚಿನಮನಿ ಅವರನ್ನು ಅಭಿನಂದಿಸಿದರು.

ಈ ಸಂದರ್ಭದಲ್ಲಿ ಡಿಡಿಪಿಐ (ಅಭಿವೃದ್ಧಿ) ಮೋಹನ್ ದಂಡಿನ, ಡಯಟ್ ಪ್ರಾಂಶುಪಾಲ ಝಡ್.ಎಂ. ಖಾಜಿ, ತಾಲೂಕು ಶಿಕ್ಷಣಾಧಿಕಾರಿ ಶ್ರೀನಿವಾಸ, ಶಿಕ್ಷಣ ಇಲಾಖೆಯ ಅಧಿಕಾರಿಗಳು ಹಾಗೂ ಗಣ್ಯರಾದ ನೂರಅಹ್ಮದ್ ಕರಜಗಿ ಉಪಸ್ಥಿತರಿದ್ದರು.

ಬೋಧನಾ ಕ್ಷೇತ್ರದಲ್ಲಿ ಸಲ್ಲಿಸಿದ ಅತ್ಯುತ್ತಮ ಸೇವೆ, ಪರಿಶ್ರಮ, ಶ್ರದ್ಧೆ, ಕರ್ತವ್ಯನಿಷ್ಠೆ ಹಾಗೂ ವಿದ್ಯಾರ್ಥಿಗಳ ಶೈಕ್ಷಣಿಕ ಪ್ರಗತಿಗಾಗಿ ನೀಡಿದ ಗಮನಾರ್ಹ ಕೊಡುಗೆಯನ್ನು ಪರಿಗಣಿಸಿ ನಿಯಾಜ್‌ಅಹ್ಮದ್ ಹಂಚಿನಮನಿ ಅವರಿಗೆ ಈ ಪ್ರಶಸ್ತಿ ನೀಡಲಾಗಿದೆ.

ಸರ್ಕಾರಿ ಉರ್ದು ಪ್ರೌಢಶಾಲೆ, ತಡಸದಲ್ಲಿ ಸಹಾಯಕ ಶಿಕ್ಷಕರಾಗಿ ಸೇವೆ ಸಲ್ಲಿಸುತ್ತಿರುವ ಹಂಚಿನಮನಿ ಅವರ ಸಾಧನೆಗೆ ಮುಸ್ಲಿಂ ಎಂಪ್ಲಾಯಿಜ್ ವೆಲ್ಫೇರ್ ಅಸೋಸಿಯೇಶನ್ (ಮೇವಾ) ಗದಗ ಜಿಲ್ಲಾ ಅಧ್ಯಕ್ಷ ಡಾ. ಸಿ.ಎಂ. ರಫಿ ಹಾಗೂ ಕಾರ್ಯದರ್ಶಿ ರಸೀದ್ ಹರ್ಷ ವ್ಯಕ್ತಪಡಿಸಿ ಅಭಿನಂದಿಸಿದ್ದಾರೆ.

### ಗುರಿಯಿಲ್ಲದ ಜೀವನ ಗರಿ ಇಲ್ಲದ ಹಕ್ಕಿಯಂತೆ; ಸಾಧನೆಗೆ ಕ್ರೀಡೆ ಗುರಿ ಮುಖ್ಯ: ಫಕೀರ ದಿಂಗಾಲೇಶ್ವರ

# ಕ್ರೀಡೆ ಇಲ್ಲದ ಬದುಕು ಕೀಟ ಹತ್ತಿದ ಹಣ್ಣಿನಂತೆ!

**ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ**

ಕ್ರೀಡೆಯಲ್ಲಿ ಪಾಲ್ಗೊಳ್ಳದ ಮಕ್ಕಳು ಕೀಟ ಹತ್ತಿದ ಕಾಳಿನಂತೆ ತಮ್ಮ ದೇಹದ ಸಂಪತ್ತನ್ನು ಕಳೆದುಕೊಳ್ಳುತ್ತಾರೆ. ಗುರಿ ಇಲ್ಲದ ಮಕ್ಕಳು ಗರಿ ಇಲ್ಲದ ಹಕ್ಕಿಯಂತೆ ಎತ್ತರಕ್ಕೆ ಹಾರಲು ಸಾಧ್ಯವಿಲ್ಲ. ವಿದ್ಯಾರ್ಥಿಗಳು ಕ್ರೀಡೆ ಹಾಗೂ ಜೀವನದಲ್ಲಿ ಸಾಧಿಸುವ ಗುರಿ ಹೊಂದಿದ್ದರೆ ಯಶಸ್ಸು ಸಾಧ್ಯ ಎಂದು ಶಿರಹಟ್ಟಿ ಶ್ರೀ ಫಕೀರೇಶ್ವರ ಸಂಸ್ಥಾನಮಠದ ಶ್ರೀ ಫಕೀರ ದಿಂಗಾಲೇಶ್ವರ ಜಗದ್ಗುರು ಹೇಳಿದರು.

ಬಾಲೇಹೊಸೂರಿನಲ್ಲಿ ಮಂಗಳವಾರ ನಡೆದ ಸೂರಣಗಿ ಗ್ರುಪ್ ಮಟ್ಟದ ಶಾಲೆಗಳ ಕ್ರೀಡಾಕೂಟ ಉದ್ಘಾಟಿಸಿ ಅವರು ಮಾತನಾಡಿದರು.

ಸದೃಢ ದೇಹದಲ್ಲಿ ದೃಢ ಮನಸ್ಸು ನೆಲೆಗೊಳ್ಳಲು ಕ್ರೀಡೆ ಅಗತ್ಯ. ಕ್ರೀಡೆಯಿಂದ ದೈಹಿಕ ಆರೋಗ್ಯದ ಜತೆಗೆ ಆತ್ಮವಿಶ್ವಾಸ, ಶಿಸ್ತು, ಸಮಯಪ್ರಜ್ಞೆ ಹಾಗೂ ನಾಯಕತ್ವ ಗುಣಗಳು ಬೆಳೆಸಿಕೊಳ್ಳಲು ಸಾಧ್ಯ. ಆದ್ದರಿಂದ



ವಿದ್ಯಾರ್ಥಿಗಳು ವಿದ್ಯಾಭ್ಯಾಸದೊಂದಿಗೆ ಕ್ರೀಡಾ ಚಟುವಟಿಕೆಗಳಲ್ಲೂ ಸಕ್ರಿಯವಾಗಿ ಪಾಲ್ಗೊಳ್ಳಬೇಕು. ಮೊಬೈಲ್ ಹಾಗೂ ಟಿವಿಯಂತಹ ಸಾಧನಗಳಿಗೆ ಹೆಚ್ಚಿನ ಸಮಯ ಮೀಸಲಿಡುವ ಬದಲು ದೈಹಿಕ ಚಟುವಟಿಕೆಗಳಿಗೆ ಆದ್ಯತೆ ನೀಡಬೇಕು ಎಂದು ಸಲಹೆ ನೀಡಿದರು.

ಕ್ರೀಡೆಯಲ್ಲಿ ಸೋಲು–ಗೆಲುವು ಸಹಜ. ಸೋಲಿನಿಂದ ನಿರಾಶರಾಗದೆ ಅದರಿಂದ ಪಾಠ ಕಲಿತು ಮುಂದಿನ ಸಾಧನೆಗೆ ಪರಿಶ್ರಮಿಸಬೇಕು. ಕ್ರೀಡಾಕೂಟಗಳು ವಿದ್ಯಾರ್ಥಿಗಳಲ್ಲಿನ ಪ್ರತಿಭೆಯನ್ನು ಗುರುತಿಸುವುದರ ಜತೆಗೆ ಕ್ರೀಡಾಸ್ಫೂರ್ತಿ ಹಾಗೂ ತಂಡದ ಮನೋಭಾವ ಬೆಳೆಸಲು ಸಹಕಾರಿಯಾಗುತ್ತವೆ ಎಂದರು.

ತಾಲೂಕಾ ಪ್ರಾಥಮಿಕ ಶಾಲಾ ಶಿಕ್ಷಕರ ಸಂಘದ ಅಧ್ಯಕ್ಷ ಎಂ.ಎನ್. ಭರಮಗೌಡ್ರ ಮಾತನಾಡಿ, ಗ್ರಾಮೀಣ ವಿದ್ಯಾರ್ಥಿಗಳಲ್ಲಿರುವ ಪ್ರತಿಭೆ ಅನಾವರಣಗೊಳ್ಳಲು ಇಂತಹ ಕ್ರೀಡಾಕೂಟಗಳು ಉತ್ತಮ ವೇದಿಕೆಯಾಗಿವೆ. ವಿದ್ಯಾರ್ಥಿಗಳು ದೊರೆಯುವ ಅವಕಾಶಗಳನ್ನು ಸದುಪಯೋಗಪಡಿಸಿಕೊಂಡು ಜಿಲ್ಲಾ, ರಾಜ್ಯ ಹಾಗೂ ರಾಷ್ಟ್ರಮಟ್ಟದಲ್ಲಿ ಸಾಧನೆ ಮಾಡುವ ಗುರಿ ಹೊಂದಬೇಕು ಎಂದು ಕರೆ ನೀಡಿದರು.

> ಕ್ರೀಡೆ ವಿದ್ಯಾರ್ಥಿಗಳ ದೇಹವನ್ನು ಸದೃಢಗೊಳಿಸುವುದರ ಜತೆಗೆ ಆತ್ಮವಿಶ್ವಾಸ, ಶಿಸ್ತು ಮತ್ತು ನಾಯಕತ್ವ ಗುಣಗಳನ್ನು ಬೆಳೆಸುತ್ತದೆ. ಕ್ರೀಡೆಯಲ್ಲಿ ಗುರಿ ಇಟ್ಟುಕೊಂಡು ಪರಿಶ್ರಮಿಸಿದರೆ ಯಶಸ್ಸು ಖಚಿತ.
>
> - ಶ್ರೀ ಫಕೀರ ದಿಂಗಾಲೇಶ್ವರ ಜಗದ್ಗುರು

ಗ್ರಾಮದ ಹಿರಿಯರಾದ ಗೋಪಾಲರಾವ್ ಕುಬೇರ, ಶಿವಪ್ಪ ಅಂಗೂರ, ಡಿ.ಸಿ. ಬಡೇಖಾನ್, ರಾಮಪ್ಪ ಹಾವನೂರ, ಫಕ್ಕೀರೇಶ ಮ್ಯಾಟಣ್ಣವರ, ನಾಗಯ್ಯ ಮಠಪತಿ, ಜುಂಜಪ್ಪ ಮುದಿಯಮ್ಮನವರ, ಫಕ್ಕೀರಯ್ಯ ಹಿರೇಮಠ, ದೇವೇಂದ್ರಪ್ಪ ಮತ್ತೂರ, ಬಸವರಾಜ ನೀಲಣ್ಣನವರ, ಗುರುಪಾದಪ್ಪ ಜಾಲವಾಡಗಿ ಉಪಸ್ಥಿತರಿದ್ದರು.

ಸಿಆರ್‌ಪಿ ಲೋಕೇಶ ಮಠ ಪ್ರಾಸ್ತಾವಿಕವಾಗಿ ಮಾತನಾಡಿದರು. ಸಿದ್ದಲಿಂಗಯ್ಯ ಗಾರವಾಡಮಠ ಸ್ವಾಗತಿಸಿದರು. ರೇಣುಕಸ್ವಾಮಿ ವೆಂಕಟಾಪುರಮಠ ವಂದಿಸಿದರು.

ಕ್ರೀಡಾಕೂಟದಲ್ಲಿ ಸೂರಣಗಿ ಗ್ರುಪ್ ವ್ಯಾಪ್ತಿಯ ವಿವಿಧ ಶಾಲೆಗಳ ವಿದ್ಯಾರ್ಥಿಗಳು ಉತ್ಸಾಹದಿಂದ ಪಾಲ್ಗೊಂಡು ವಿವಿಧ ವೈಯಕ್ತಿಕ ಹಾಗೂ ಸಾಮೂಹಿಕ ಸ್ಪರ್ಧೆಗಳಲ್ಲಿ ತಮ್ಮ ಪ್ರತಿಭೆ ಪ್ರದರ್ಶಿಸಿದರು. ಶಿಕ್ಷಕರು ಹಾಗೂ ದೈಹಿಕ ಶಿಕ್ಷಣ ಶಿಕ್ಷಕರಾದ ಎಂ.ಎಸ್. ಚಾಲಕಬ್ಬಿ, ಎಚ್.ಎಂ. ಸಪ್ಪಿನ, ಪರಶುರಾಮ ಕೊರವರ, ಈರನಗೌಡ ಪಾಟೀಲ ಹಾಗೂ ರಮೇಶ ಮುದಗಲ್ ಮಾರ್ಗದರ್ಶನ ನೀಡಿದರು. ಶಾಲೆಗಳ ಮುಖ್ಯ ಶಿಕ್ಷಕರು, ಶಿಕ್ಷಕರು, ವಿದ್ಯಾರ್ಥಿಗಳು ಹಾಗೂ ಪಾಲಕರು ಉಪಸ್ಥಿತರಿದ್ದರು.

### ಬಿಜೆಪಿಯಿಂದ ಸಮಾಜಮುಖಿ ಸೇವಾ ಅಭಿಯಾನಕ್ಕೆ ಚಾಲನೆ

# ಮೋದಿಯವರ 25 ವರ್ಷಗಳ ಸೇವೆ ಸ್ಮರಣೆ



**ವಿಜಯಸಾಕ್ಷಿ ಸುದ್ದಿ, ಗದಗ**

ಪ್ರಧಾನಮಂತ್ರಿ ನರೇಂದ್ರ ಮೋದಿಯವರ ಸಾರ್ವಜನಿಕ ಸೇವೆ ಮತ್ತು ಸಮರ್ಪಣೆಯ 25 ವರ್ಷಗಳ ಸ್ಮರಣಾರ್ಥ ಬಿಜೆಪಿ ಗದಗ ಜಿಲ್ಲಾ ಘಟಕದಿಂದ ಹಮ್ಮಿಕೊಳ್ಳಲಾಗಿರುವ ವಿವಿಧ ಸಮಾಜಮುಖಿ ಸೇವಾ ಕಾರ್ಯಕ್ರಮಗಳಿಗೆ ಜಿಲ್ಲಾ ಬಿಜೆಪಿ ಕಾರ್ಯಾಲಯದಲ್ಲಿ ಚಾಲನೆ ನೀಡಲಾಯಿತು.

ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದ ಶಾಸಕ ಹಾಗೂ ಮಾಜಿ ಸಚಿವ ಸಿ.ಸಿ. ಪಾಟೀಲ, ಪ್ರಧಾನಮಂತ್ರಿ ನರೇಂದ್ರ ಮೋದಿ ಅವರು ಒಂದು ದಿನವೂ ರಜೆ ಹಾಕದೆ ದೇಶಕ್ಕಾಗಿ ಹಗಲಿರುಳು ಶ್ರಮಿಸುತ್ತಿರುವುದು ಶ್ಲಾಘನೀಯ ಎಂದರು. ಪಶ್ಚಿಮ ಪದವೀಧರ ಚುನಾವಣೆಯಲ್ಲಿ ಬಿಜೆಪಿ ಅಭ್ಯರ್ಥಿಯ ಗೆಲುವಿಗಾಗಿ ಕಾರ್ಯಕರ್ತರು ಶ್ರಮಿಸಬೇಕು ಎಂದು ಕರೆ ನೀಡಿದರು.

ಬಿಜೆಪಿ ಗದಗ ಜಿಲ್ಲಾಧ್ಯಕ್ಷ ತೋಟಪ್ಪ (ರಾಜು) ಕುರುಡಗಿ ಮಾತನಾಡಿ, ನರೇಂದ್ರ ಮೋದಿಯವರ ಸಾರ್ವಜನಿಕ ಸೇವೆ ಮತ್ತು ಸಮರ್ಪಣೆಯ 25 ವರ್ಷಗಳ ಸ್ಮರಣಾರ್ಥ ವಿವಿಧ ಸೇವಾ ಕಾರ್ಯಕ್ರಮಗಳನ್ನು ಆಚರಿಸುವುದು ಪಕ್ಷದ ಪ್ರತಿಯೊಬ್ಬ ಕಾರ್ಯಕರ್ತನ ಜವಾಬ್ದಾರಿಯಾಗಿದೆ ಎಂದರು.

ಕಾರ್ಯಕ್ರಮದ ಸಂಚಾಲಕ ಹಾಗೂ ಜಿಲ್ಲಾ ಪ್ರಧಾನ ಕಾರ್ಯದರ್ಶಿ ಲಿಂಗರಾಜ ಪಾಟೀಲ ಮಾತನಾಡಿ, ಮೋದಿಯವರ ಸಾರ್ವಜನಿಕ ಸೇವೆಯ 25 ವರ್ಷಗಳ ಸ್ಮರಣಾರ್ಥ ಜಿಲ್ಲೆಯಲ್ಲಿ ಹಲವು ಸೇವಾ ಚಟುವಟಿಕೆಗಳನ್ನು ಹಮ್ಮಿಕೊಳ್ಳಲಾಗಿದೆ ಎಂದು ವಿವರಿಸಿದರು.

'ಆಶೀರ್ವಾದ ದೀಪ', '25 ಕೋಟಿ ಮಕ್ಕಳ ಕನಸಿನ ಭಾರತ', 'ನಮೋ ಸೇವಾ ಕಥನ' ಬೀದಿ ನಾಟಕ, ಅಂಗಳದ ಉತ್ಸವ, ಬದಲಾವಣೆಯ ಕಥೆ, ವಿಕಸಿತ ಭಾರತ ಸಂಕಲ್ಪ ಯಾತ್ರೆ, ಸೇವಾ ಜ್ಯೋತಿ ಯಾತ್ರೆ ಸೇರಿದಂತೆ ವಿವಿಧ ಕಾರ್ಯಕ್ರಮಗಳನ್ನು ಆಯೋಜಿಸಲಾಗುವುದು. 'ಸೇವೆ ನನ್ನ ಯೋಗದಾನ'ದಡಿ ರಕ್ತದಾನ ಶಿಬಿರ, ಅನಾಥಾಶ್ರಮ ಹಾಗೂ ವೃದ್ಧಾಶ್ರಮಗಳಿಗೆ ಭೇಟಿ, ವೃಕ್ಷಾರೋಪಣ, ಆರೋಗ್ಯ ತಪಾಸಣಾ ಶಿಬಿರ ಮತ್ತು ಸ್ವಚ್ಛತಾ ಅಭಿಯಾನ ಸೇರಿದಂತೆ ಹಲವು ಕಾರ್ಯಕ್ರಮಗಳನ್ನು ನಡೆಸಲಾಗುವುದು ಎಂದು ತಿಳಿಸಿದರು.

ಈ ಸಂದರ್ಭದಲ್ಲಿ ಶಾಸಕ ಡಾ. ಚಂದ್ರು ಲಮಾಣಿ, ವಿಧಾನ ಪರಿಷತ್ ಸದಸ್ಯ ಎಸ್.ವಿ. ಸಂಕನೂರ, ಕೇಂದ್ರ ಆಹಾರ ನಿಗಮದ ಸದಸ್ಯ ರವಿ ದಂಡಿನ, ನರಗುಂದ ಯುವ ಮುಖಂಡ ಉಮೇಶಗೌಡ ಪಾಟೀಲ, ಜಿಲ್ಲಾ ಪ್ರಧಾನ ಕಾರ್ಯದರ್ಶಿ ಪಕ್ಕಿರೇಶ ರಟ್ಟಿಹಳ್ಳಿ, ಸೇವಾ ಸಂಕಲ್ಪ ಅಭಿಯಾನ ತಂಡದ ಜಿಲ್ಲಾ ಸದಸ್ಯರಾದ ಅನಿಲ ಅಬ್ಬಿಗೇರಿ, ಸಂತೋಷ ಅಕ್ಕಿ ಸೇರಿದಂತೆ ಬಿಜೆಪಿ 9 ಮಂಡಲಗಳ ಅಧ್ಯಕ್ಷರು ಹಾಗೂ ಪ್ರಧಾನ ಕಾರ್ಯದರ್ಶಿಗಳು, ಜಿಲ್ಲಾ ಪದಾಧಿಕಾರಿಗಳು, ಜಿಲ್ಲಾ ಮೋರ್ಚಾ ಅಧ್ಯಕ್ಷರು ಹಾಗೂ ಪ್ರಧಾನ ಕಾರ್ಯದರ್ಶಿಗಳು ಮತ್ತು ಸೇವಾ ಸಂಕಲ್ಪ ಅಭಿಯಾನದ ಜಿಲ್ಲಾ ಹಾಗೂ ಮಂಡಲ ತಂಡದ ಸದಸ್ಯರು ಭಾಗವಹಿಸಿದ್ದರು.

> ಮೋದಿಯವರ ಸಾರ್ವಜನಿಕ ಸೇವೆ ಮತ್ತು ಸಮರ್ಪಣೆಯ 25 ವರ್ಷಗಳ ಸ್ಮರಣಾರ್ಥ ಹಮ್ಮಿಕೊಳ್ಳಲಾಗಿರುವ ವಿವಿಧ ಸೇವಾ ಕಾರ್ಯಕ್ರಮಗಳನ್ನು ಯಶಸ್ವಿಗೊಳಿಸುವುದು ನಮ್ಮೆಲ್ಲರ ಜವಾಬ್ದಾರಿ. ಕಾರ್ಯಕರ್ತರು ಸೇವಾ ಚಟುವಟಿಕೆಗಳಲ್ಲಿ ಸಕ್ರಿಯವಾಗಿ ತೊಡಗಿಸಿಕೊಳ್ಳಬೇಕು.
>
> - ತೋಟಪ್ಪ (ರಾಜು) ಕುರುಡಗಿ, ಬಿಜೆಪಿ ಗದಗ ಜಿಲ್ಲಾಧ್ಯಕ್ಷ

# ರೈತ, ದಲಿತ ವಿರೋಧಿ ಸರ್ಕಾರಕ್ಕೆ ತಕ್ಕ ಪಾಠ ಕಲಿಸಬೇಕು: ಐ.ಎಸ್. ಪೂಜಾರ



**ವಿಜಯಸಾಕ್ಷಿ ಸುದ್ದಿ, ಗದಗ**

ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ. ವಿಜಯೇಂದ್ರ ನೇತೃತ್ವದಲ್ಲಿ ಕಾಂಗ್ರೆಸ್ ಸರ್ಕಾರದ ದುರಾಡಳಿತ, ಭ್ರಷ್ಟಾಚಾರ ಹಾಗೂ ರೈತ ಮತ್ತು ದಲಿತ ವಿರೋಧಿ ನೀತಿಗಳನ್ನು ಖಂಡಿಸಿ ಹಮ್ಮಿಕೊಂಡಿರುವ 170 ಕಿ.ಮೀ. ಬಳ್ಳಾರಿ ಚಲೋ ಎರಡನೇ ಹಂತದ ಪಾದಯಾತ್ರೆಯಲ್ಲಿ ಶಿರಹಟ್ಟಿ ಮತಕ್ಷೇತ್ರದ ಬಿಜೆಪಿ ಟಿಕೆಟ್ ಆಕಾಂಕ್ಷಿ ಹಾಗೂ ಹಿರಿಯ ಮುಖಂಡ ಐ.ಎಸ್. ಪೂಜಾರ ತಮ್ಮ ಬೆಂಬಲಿಗರೊಂದಿಗೆ ಭಾಗವಹಿಸಿದ್ದರು.

ಮಸ್ಕಿ ತಾಲೂಕಿನ ಸಂತೇಕೆಲ್ಲೂರಿನಲ್ಲಿ ನಡೆದ ಪಾದಯಾತ್ರೆಯಲ್ಲಿ ಪಾಲ್ಗೊಂಡ ಅವರು, ರಾಜ್ಯ ಸರ್ಕಾರದ ವಿವಿಧ ವೈಫಲ್ಯಗಳ ವಿರುದ್ಧ ಆಕ್ರೋಶ ವ್ಯಕ್ತಪಡಿಸಿದರು. ವಿಶೇಷವಾಗಿ ರೈತರು ಹಾಗೂ ದಲಿತರ ಹಿತಾಸಕ್ತಿಗೆ ವಿರುದ್ಧವಾದ ನೀತಿಗಳನ್ನು ಸರ್ಕಾರ ಅನುಸರಿಸುತ್ತಿದೆ ಎಂದು ಆರೋಪಿಸಿ, ಮುಂಬರುವ ಚುನಾವಣೆಯಲ್ಲಿ ರಾಜ್ಯ ಸರ್ಕಾರಕ್ಕೆ ಜನರು ತಕ್ಕ ಪಾಠ ಕಲಿಸಬೇಕು ಎಂದು ಹೇಳಿದರು.

ಬರಗಾಲ ಘೋಷಣೆಯಲ್ಲಿಯೂ ಸರ್ಕಾರ ಸಂಪೂರ್ಣ ವಿಫಲವಾಗಿದೆ ಎಂದು ಟೀಕಿಸಿದ ಪೂಜಾರ, ಪಾದಯಾತ್ರೆ ಘೋಷಣೆಯಾದ ದಿನವೇ ಮುಖ್ಯಮಂತ್ರಿ ಗದಗ ಜಿಲ್ಲೆಗೆ ಬರಗಾಲ ಪೀಡಿತ ಪ್ರದೇಶಗಳ ವೀಕ್ಷಣೆಗೆ ಆಗಮಿಸಿರುವುದು ರೈತರು ಹಾಗೂ ಜನರಿಗೆ ಕೇವಲ ಆಶ್ವಾಸನೆ ನೀಡುವ ಕ್ರಮವಾಗಿದೆ. ಇದು ಸರ್ಕಾರದ ಆಡಳಿತ ವೈಫಲ್ಯವನ್ನು ಎತ್ತಿ ತೋರಿಸುತ್ತಿದೆ ಎಂದು ಆಕ್ರೋಶ ವ್ಯಕ್ತಪಡಿಸಿದರು.

ಕೆಲವು ಜಿಲ್ಲೆಗಳಲ್ಲಿ ಕೆಲವು ತಾಲೂಕುಗಳನ್ನು ಹೊರತುಪಡಿಸಿ ಬರಗಾಲ ಘೋಷಿಸಿರುವುದು ರೈತರ ಆಕ್ರೋಶಕ್ಕೆ ಕಾರಣವಾಗಿದೆ. ಸರ್ಕಾರ ರೈತರ ಸಂಕಷ್ಟಕ್ಕೆ ಸೂಕ್ತವಾಗಿ ಸ್ಪಂದಿಸುವಲ್ಲಿ ವಿಫಲವಾಗಿದೆ ಎಂದು ಅವರು ಆರೋಪಿಸಿದರು.

ಪಾದಯಾತ್ರೆಯಲ್ಲಿ ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ. ವಿಜಯೇಂದ್ರ, ಮಾಜಿ ಸಚಿವ ಬಿ. ಶ್ರೀರಾಮುಲು, ಶಿರಹಟ್ಟಿ ಮತಕ್ಷೇತ್ರದ ಬಿಜೆಪಿ ಪದಾಧಿಕಾರಿಗಳು, ಮುಖಂಡರು ಹಾಗೂ ಪಕ್ಷದ ಕಾರ್ಯಕರ್ತರು ಪಾಲ್ಗೊಂಡಿದ್ದರು.

### ಡಿಜೆ, ಜೂಜು, ಅಕ್ರಮ ಚಟುವಟಿಕೆಗಳಿಗೆ ಕಡಿವಾಣ

# ಗಣೇಶೋತ್ಸವ ಶಾಂತಿಯುತ ಆಚರಣೆಗೆ ಪೊಲೀಸರ ಕಟ್ಟುನಿಟ್ಟಿನ ಸೂಚನೆ

**ವಿಜಯಸಾಕ್ಷಿ ಸುದ್ದಿ, ನರೇಗಲ್ಲ**

ಗಣೇಶೋತ್ಸವವನ್ನು ಶಾಂತಿ, ಸೌಹಾರ್ದತೆ ಹಾಗೂ ಸಂಭ್ರಮದಿಂದ ಆಚರಿಸುವ ಜತೆಗೆ ಕಾನೂನು ಮತ್ತು ಸುವ್ಯವಸ್ಥೆ ಕಾಪಾಡಲು ಎಲ್ಲ ಗಣೇಶೋತ್ಸವ ಮಂಡಳಿಗಳು ನಿಯಮಗಳನ್ನು ಕಟ್ಟುನಿಟ್ಟಾಗಿ ಪಾಲಿಸಬೇಕು ಎಂದು ನರೇಗಲ್ಲ ಪೊಲೀಸ್ ಠಾಣೆಯ ಪಿಎಸ್ಐ ಐಶ್ವರ್ಯ ನಾಗರಾಳ ಸೂಚಿಸಿದರು.

ಸಮೀಪದ ಜಕ್ಕಲಿ ಗ್ರಾಮದ ಗ್ರಾಮ ಚಾವಡಿಯಲ್ಲಿ ರವಿವಾರ ಸಂಜೆ ನರೇಗಲ್ಲ ಪೊಲೀಸ್ ಠಾಣೆ ವತಿಯಿಂದ ಆಯೋಜಿಸಿದ್ದ ಗಣೇಶೋತ್ಸವದ ಶಾಂತಿ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಗಣೇಶೋತ್ಸವ ಎಲ್ಲರ ಹಬ್ಬ. ಹಬ್ಬಕ್ಕೆ ಅಡ್ಡಿಪಡಿಸುವುದು ಪೊಲೀಸರ ಉದ್ದೇಶವಲ್ಲ. ಎಲ್ಲರೂ ಸುರಕ್ಷಿತವಾಗಿ ಹಾಗೂ ನೆಮ್ಮದಿಯಿಂದ ಹಬ್ಬ ಆಚರಿಸುವಂತಾಗಬೇಕು. ಆದ್ದರಿಂದ ಗಣೇಶೋತ್ಸವ ಮಂಡಳಿಗಳು ಹೆಚ್ಚಿನ ಜವಾಬ್ದಾರಿಯಿಂದ ನಡೆದುಕೊಳ್ಳಬೇಕು ಎಂದರು.

ಡಿಜೆ ಬಳಕೆಗೆ ಸಂಪೂರ್ಣ ನಿಷೇಧವಿದ್ದು, ಈಗಾಗಲೇ ಡಿಜೆ ಕಾಯ್ದಿರಿಸಿದ್ದರೆ ಅದನ್ನು ರದ್ದುಪಡಿಸಿ ಹಣವನ್ನು ವಾಪಸ್ ಪಡೆಯುವಂತೆ ಸಲಹೆ ನೀಡಿದರು. ಡಿಜೆಗಾಗಿ ಖರ್ಚು ಮಾಡುವ ಹಣವನ್ನು ಭಜನಾ ತಂಡಗಳು, ಕಲಾವಿದರು ಹಾಗೂ ಸಾಂಸ್ಕೃತಿಕ ಕಾರ್ಯಕ್ರಮಗಳಿಗೆ ಬಳಸಿದರೆ ಸ್ಥಳೀಯ ಕಲಾವಿದರ ಕುಟುಂಬಗಳಿಗೆ




ನೆರವಾಗಲಿದೆ ಎಂದು ಹೇಳಿದರು.

ಮಂಟಪಗಳಲ್ಲಿ ಇಸ್ಪೀಟ್ ಸೇರಿದಂತೆ ಯಾವುದೇ ರೀತಿಯ ಜೂಜಾಟ, ಅಕ್ರಮ ಚಟುವಟಿಕೆ, ಮದ್ಯಪಾನ ಮಾಡಿ ಗಲಾಟೆ ಹಾಗೂ ಸಾರ್ವಜನಿಕರಿಗೆ ತೊಂದರೆ ಉಂಟುಮಾಡುವ ಕೃತ್ಯಗಳಿಗೆ ಅವಕಾಶವಿಲ್ಲ. ಇಂತಹ ಘಟನೆಗಳು ನಡೆದರೆ ಮೊದಲು ಗಣೇಶೋತ್ಸವ ಸಮಿತಿಯ ಸದಸ್ಯರನ್ನೇ ಹೊಣೆಗಾರರನ್ನಾಗಿ ಮಾಡಿ, ನಂತರ ಸಂಬಂಧಿಸಿದವರ ವಿರುದ್ಧ ಕಾನೂನು ಕ್ರಮ ಕೈಗೊಳ್ಳಲಾಗುವುದು ಎಂದು ತಿಳಿಸಿದರು.

ಕರ್ತವ್ಯದಲ್ಲಿರುವ ಪೊಲೀಸ್ ಸಿಬ್ಬಂದಿಯೊಂದಿಗೆ ಯಾರೂ ಅಸಭ್ಯವಾಗಿ ಅಥವಾ ಅನುಚಿತವಾಗಿ ವರ್ತಿಸಬಾರದು. ಅಂತಹ ಪ್ರಕರಣಗಳಲ್ಲಿ ಯಾವುದೇ ಮುಲಾಜಿಲ್ಲದೆ ಕಾನೂನು ಕ್ರಮ ಜರುಗಿಸಲಾಗುವುದು ಎಂದರು.

ಧ್ವನಿವರ್ಧಕ ಬಳಕೆಯಲ್ಲಿಯೂ ನಿಗದಿತ ನಿಯಮಗಳನ್ನು ಪಾಲಿಸಬೇಕು. ರಾತ್ರಿ 10 ಗಂಟೆಯೊಳಗೆ ಕಾರ್ಯಕ್ರಮಗಳನ್ನು ಮುಕ್ತಾಯಗೊಳಿಸಬೇಕು. ನಿಯಮ ಉಲ್ಲಂಘಿಸಿ ಡಿಜೆ ಅಥವಾ ಧ್ವನಿವರ್ಧಕ ಬಳಸಿದರೆ ಉಪಕರಣಗಳನ್ನು ವಶಕ್ಕೆ ಪಡೆಯಲಾಗುವುದು ಎಂದು ಎಚ್ಚರಿಸಿದರು.

ಹಬ್ಬ ಎಂದರೆ ಪೂಜೆ, ಭಕ್ತಿ, ಸಂಸ್ಕೃತಿ ಮತ್ತು ಸೌಹಾರ್ದತೆ. ಕುಡಿದು ಬಂದು ಗಲಾಟೆ ಮಾಡುವುದು ಅಥವಾ ರಾತ್ರಿ ತಡವರೆಗೆ ಅಶಿಸ್ತಿನಿಂದ ವರ್ತಿಸುವುದು ನಮ್ಮ ಸಂಸ್ಕೃತಿಯಲ್ಲ. ಎಲ್ಲರೂ ಪರಂಪರೆಯನ್ನು ಗೌರವಿಸಿ ಶಾಂತಿಯುತವಾಗಿ ಹಬ್ಬ ಆಚರಿಸೋಣ ಎಂದು ಕರೆ ನೀಡಿದರು.

> ಪೊಲೀಸ್ ಇಲಾಖೆ ಜನರ ರಕ್ಷಣೆಗೆ ಸದಾ ಸಿದ್ಧವಿದೆ. ಯಾವುದೇ ಸಮಸ್ಯೆ ಎದುರಾದರೆ ಸ್ಥಳೀಯ ಪೊಲೀಸ್ ಸಿಬ್ಬಂದಿಯನ್ನು ಸಂಪರ್ಕಿಸಿ. ನಾವು ನಿಮ್ಮ ವಿರುದ್ಧ ಇರುವವರಲ್ಲ; ನಿಮ್ಮ ಸಹಕಾರದಿಂದ ಹಬ್ಬ ಉತ್ತಮವಾಗಿ ನಡೆದರೆ ನಮಗೂ ಸಂತೋಷ.
>
> - ಐಶ್ವರ್ಯ ನಾಗರಾಳ, ಪಿಎಸ್ಐ, ನರೇಗಲ್ಲ ಠಾಣೆ

ಸಭೆಯಲ್ಲಿ ಅಶೋಕಪ್ಪ ಯಾವಗಲ್ಲ, ವೀರಯ್ಯ ಹಿರೇಮಠ, ಶರಣಪ್ಪ ಕುರಡಗಿ, ಚನ್ನಬಸವ ಅರಹುಣಸಿ, ಸಂಗಮೇಶ ಮೆಣಸಗಿ, ಮುತ್ತು ಮೇಟಿ ಸೇರಿದಂತೆ ವಿವಿಧ ಗಣೇಶೋತ್ಸವ ಮಂಡಳಿಗಳ ಮುಖಂಡರು, ಯುವಕರು ಹಾಗೂ ಗ್ರಾಮಸ್ಥರು ಉಪಸ್ಥಿತರಿದ್ದರು.

ನರೇಗಲ್ಲ ಠಾಣೆಯ ಹವಾಲ್ದಾರ ಪುಂಡಲೀಕಪ್ಪ ದಾಸರ, ಪೊಲೀಸ್ ಪೇದೆಗಳಾದ ಕಿರಣಕುಮಾರ ವಿ. ಹಿರೇಮಠ, ಸಂತೋಷ ಘಾಟಗೆ ಭಾಗವಹಿಸಿದ್ದರು. ಪೇದೆ ಚಂದ್ರು ದೊಡ್ಡಮನಿ ಪ್ರಾಸ್ತಾವಿಕವಾಗಿ ಮಾತನಾಡಿ ನಿರೂಪಿಸಿದರು. ಶಿವರಾಜ ಮುಗಳಿ ಸಭಿಕರನ್ನು ಉದ್ದೇಶಿಸಿ ಮಾತನಾಡಿದರು.

# ನೀಲಗುಂದದಲ್ಲಿ ದ್ಯಾಮವ್ವ ದೇವಿ ಉಡಿ ತುಂಬುವ ಕಾರ್ಯಕ್ರಮ



**ವಿಜಯಸಾಕ್ಷಿ ಸುದ್ದಿ, ಗದಗ**

ತಾಲೂಕಿನ ನೀಲಗುಂದ ಗ್ರಾಮದಲ್ಲಿ ಶ್ರಾವಣ ಮಾಸದ ಕೊನೆಯ ಸೋಮವಾರದಂದು ಶ್ರೀ ವೀರಭದ್ರೇಶ್ವರ ರಥೋತ್ಸವ ಹಾಗೂ ಮಂಗಳವಾರದಂದು ದ್ಯಾಮವ್ವ ದೇವಿಯ ಉಡಿ ತುಂಬುವ ಕಾರ್ಯಕ್ರಮ ವಿಜೃಂಭಣೆಯಿಂದ ಜರುಗಿತು.

ಶ್ರಾವಣ ಮಾಸದ ಅಂಗವಾಗಿ ನಡೆದ ಧಾರ್ಮಿಕ ಕಾರ್ಯಕ್ರಮಗಳಲ್ಲಿ ಗ್ರಾಮಸ್ಥರು ಹಾಗೂ ಭಕ್ತರು ಹೆಚ್ಚಿನ ಸಂಖ್ಯೆಯಲ್ಲಿ ಪಾಲ್ಗೊಂಡು ದೇವರ ದರ್ಶನ ಪಡೆದು, ವಿಶೇಷ ಪೂಜೆ ಸಲ್ಲಿಸಿದರು. ದ್ಯಾಮವ್ವ ದೇವಿಗೆ ಉಡಿ ತುಂಬಿಸಿ ಭಕ್ತಿಭಾವ ಮೆರೆದರು. ಗ್ರಾಮದಾದ್ಯಂತ ಹಬ್ಬದ ವಾತಾವರಣ ನಿರ್ಮಾಣವಾಗಿತ್ತು.

VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka
Printed at : Sai Printing Press, Near Joda Maruti Temple, Gadag-582101, Dist : Gadag- Karnataka